# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 80 | TUESDAY 02-06-2026 | PRGI No : KNKAN/26/A0962 | Pages:4 | Rs.2.00 | M: 9742418836


## ಜನ ಮತ್ತು ಜಾನುವಾರುಗಳ ಹಿತದೃಷ್ಟಿಯಿಂದ ಹಿಡಕಲ್ ಜಲಾಶಯದಿಂದ ನೀರನ್ನು ಹರಿಸಿ: ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ



**ಬೆಳಗಾವಿ ವಾರ್ತೆ ಗೋಕಾಕ:** ಘಟಪ್ರಭಾ ಬಲದಂಡೆ ಕಾಲುವೆ (ಜಿಆಬಿಸಿ) ಯ ದುರಸ್ತಿ ಕಾಮ ಗಾರಿಯು ಭಾಗಶಃ ಪೂರ್ತಿಯಾಗಿ ದ್ದರಿಂದ ಈ ಕಾಲುವೆ ಭಾಗದ ಜನ ಮತ್ತು ಜಾನುವಾರುಗಳ ಹಿತದೃಷ್ಟಿಯಿಂದ ಹಿಡಕಲ್ ಜಲಾಶಯದಿಂದ ನೀರನ್ನು ಹರಿಸುವಂತೆ ಅರಭಾವಿ ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಬೆಳಗಾವಿ ಪ್ರಾದೇಶಿಕ ಆಯುಕ್ತರನ್ನು ಕೋರಿದ್ದಾರೆ. ಮೂಡಲಗಿ ಮತ್ತು ಗೋಕಾಕ ತಾಲ್ಲೂಕುಗಳಲ್ಲಿ ಮಳೆಯಾಗದ್ದರಿಂದ ಬೇಸಿಗೆಯ ಸಮಯದಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯುಂಟಾಗಿದೆ. ಹಿಡಕಲ್ ಜಲಾಶಯದಿಂದ ಪ್ರತಿ ಸಲವೂ ಮೂರೂ ಕಾಲುವೆಗಳಿಗೆ ನೀರನ್ನು ಹರಿಸಲಾಗುತ್ತಿದೆಯಾದರೂ ಈ ಬಾರಿ ಘಟಪ್ರಭಾ ಬಲದಂಡೆ ಕಾಲುವೆಯು ದುರಸ್ತಿ ಕಾಮಗಾರಿಯು ಪ್ರಗತಿಯಲ್ಲಿದ್ದರಿಂದ ಘಟಪ್ರಭಾ ಬಲದಂಡೆ ಕಾಲುವೆಗೆ ನೀರನ್ನು ಹರಿಸಿಲ್ಲ. ಆದರೀಗ, ಬಲದಂಡೆಯ ಕಾಮಗಾರಿಯು ಮುಗಿದಿರುವುದರಿಂದ ಈ ಪ್ರದೇಶದ ಸಾರ್ವಜನಿಕರು ಮತ್ತು ದನ– ಕರುಗಳಿಗೆ ಕುಡಿಯುವ ನೀರಿಗಾಗಿ ಜೂನ್ 5 ರಿಂದ 10 ದಿನಗಳವರೆಗೆ ಜಿಆರ್‌ಬಿಸಿ ಕಾಲುವೆಗೆ ಪ್ರತಿ ದಿನ 2000 ಕ್ಯೂಸೆಕ್ಸ್ ನಂತೆ ಕುಡಿಯುವ ನೀರನ್ನು ಹರಿಸುವಂತೆ ಬಾಲಚಂದ್ರ ಜಾರಕಿಹೊಳಿಯವರು ಆಗ್ರಹಿಸಿದ್ದಾರೆ.

ಘಟಪ್ರಭಾ ಬಲದಂಡೆ ಕಾಲುವೆಗೆ ನೀರನ್ನು ಬಿಡುಗಡೆ ಮಾಡುವುದರಿಂದ ಕಾಲುವೆಯ ವ್ಯಾಪ್ತಿಯಲ್ಲಿನ ಅಂತರ್ಜಲ ಮಟ್ಟ ಹೆಚ್ಚಳವಾಗುವುದರೊಂದಿಗೆ ತೆರೆದ ಬಾವಿ ಮತ್ತು ಕೊಳವೆ ಬಾವಿಗಳು ಪುನರ್ಭರ್ತಿಯಾಗುತ್ತದೆ. ಸಾರ್ವಜನಿಕರು ಮತ್ತು ಜಾನುವಾರುಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಘಟಪ್ರಭಾ ಬಲದಂಡೆ ಕಾಲುವೆಗೆ ನೀರನ್ನು ಹರಿಸಲು ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಪ್ರಾದೇಶಿಕ ಆಯುಕ್ತರಿಗೆ ಮನವಿ ಮಾಡಿಕೊಂಡಿದ್ದಾರೆ.

# ನಾನು KPCC ಅಧ್ಯಕ್ಷನಾಗುವುದು ಅನಿವಾರ್ಯವಲ್ಲ; ಯಾವುದೇ ಬೇಡಿಕೆ ಇಟ್ಟಿಲ್ಲ: ಸತೀಶ್ ಜಾರಕಿಹೊಳಿ

**ಬೆಳಗಾವಿ ವಾರ್ತೆ ಬೆಳಗಾವಿ:** ರಾಜ್ಯದಲ್ಲಿ ನಾಯಕತ್ವ ಬದಲಾವಣೆ ನಂತರ ಕೆಪಿಸಿಸಿ ಪುನಾರಚನೆ ಬಗ್ಗೆ ಹರಿದಾಡುತ್ತಿರುವ ಊಹಾಪೋಹಗಳ ನಡುವೆ, ಸತೀಶ್ ಜಾರಕಿಹೊಳಿ ತಾವು ಪಕ್ಷದ ನಿಷ್ಠಾವಂತ, ಶಿಸ್ತಿನ ಸಿಪಾಯಿ ಎಂದು ಬಿಂಬಿಸಿಕೊಳ್ಳಲು ಪ್ರಯತ್ನಿಸಿದ್ದಾರೆ. ಪಕ್ಷದ ಪ್ರಮುಖ ಹುದ್ದೆಗಳನ್ನು ಭರ್ತಿ ಮಾಡುವ ಅಂತಿಮ ನಿರ್ಧಾರವು ಸಂಪೂರ್ಣವಾಗಿ ಹೈಕಮಾಂಡ್ ಗೆ ಬಿಟ್ಟ ವಿಷಯ ಎಂದಿದ್ದಾರೆ.

ಕಾಂಗ್ರೆಸ್ ಹೈ ಕಮಾಂಡ್ ಸರ್ಕಾರ ರಚನೆಗೆ ಸಂಬಂಧಿಸಿದ ಚರ್ಚೆಗಳಲ್ಲಿ ನಿರತರಾಗಿರುವುದರಿಂದ ಈ ವಿಷಯದ ಬಗ್ಗೆ ಪಕ್ಷದ ನಾಯಕತ್ವದೊಂದಿಗೆ ಮಾತನಾಡಿಲ್ಲ ಎಂದು ಜಾರಕಿಹೊಳಿ ಹೇಳಿದರು. ಕೆಪಿಸಿಸಿ ಉನ್ನತ ಹುದ್ದೆಗೆ ಲಾಬಿ ಮಾಡುತ್ತಿದ್ದಾರೆ ಎಂಬ ಊಹಾಪೋಹಗ ಳನ್ನು ತಳ್ಳಿಹಾಕಿದ ಅವರು,ಹೈಕಮಾಂಡ್ ಮುಂದೆ ಯಾವುದೇ ಬೇಡಿಕೆ ಇಟ್ಟಿಲ್ಲ ಎಂದು ಹೇಳಿದರು.

ನಾನು ಯಾವುದೇ ಬೇಡಿಕೆ ಇಟ್ಟಿಲ್ಲ. ಪಕ್ಷದ ದೃಷ್ಟಿಕೋನದಿಂದ, ನಾನು ಅಧ್ಯಕ್ಷನಾಗುವುದು ಅನಿವಾರ್ಯವಲ್ಲ. ಹೈಕಮಾಂಡ್ ತೆಗೆದುಕೊಳ್ಳುವ ಯಾವುದೇ ನಿರ್ಧಾರ ಅಂತಿಮವಾಗಿರುತ್ತದೆ" ಎಂದು ಅವರು ಹೇಳಿದರು.



ಮುಖ್ಯಮಂತ್ರಿ ಹುದ್ದೆಯ ಬದಲಾವಣೆಯ ನಂತರ ಸರ್ಕಾರ ಮತ್ತು ಸಂಘಟನೆಯ ನಡುವೆ ಸಮತೋಲನ ಕಾಪಾಡಲು ಹೈಕಮಾಂಡ್ ಪ್ರಯತ್ನಿಸುತ್ತಿರುವ ಸಮಯದಲ್ಲಿ ಸತೀಶ್ ಈ ಹೇಳಿಕೆ ನೀಡಿದ್ದಾರೆ. ಭವಿಷ್ಯದ ಚುನಾವಣೆಗಳಿಗೆ ಮುಂಚಿತವಾಗಿ ಕೆಪಿಸಿಸಿ ಅಧ್ಯಕ್ಷರ ಆಯ್ಕೆ ಪಕ್ಷದ ಅಧಿಕಾರ ರಚನೆಯನ್ನು ರೂಪಿಸುವ ನಿರ್ಣಾಯಕ ವಿಷಯವೆಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯ ಪಟ್ಟಿದ್ದಾರೆ.

ಸಂಘಟನಾ ಒಗ್ಗಟ್ಟನ್ನು ಖಚಿತಪಡಿಸಿಕೊಳ್ಳಲು ಹಿರಿಯ ನಾಯಕರನ್ನು ಒಳಗೊಂಡ ಸಮನ್ವಯ ಅಥವಾ ಕೋರ್ ಸಮಿತಿಯನ್ನು ರಚಿಸುವ ಪ್ರಸ್ತಾಪದ ವರದಿಗಳ ಕುರಿತು ಮಾತನಾಡಿದ ಜಾರಕಿಹೊಳಿ, ಈ ಕಲ್ಪನೆಯು ಹೊಸದಲ್ಲ ಮತ್ತು ಕಳೆದ ಮೂರು ವರ್ಷಗಳಿಂದ ಚರ್ಚೆಯಲ್ಲಿದೆ ಎಂದು ಹೇಳಿದರು.

ಈ ಪ್ರಸ್ತಾಪವು ಮೊದಲೇ ಇತ್ತು, ಆದರೆ ಅದನ್ನು ಎಂದಿಗೂ ಜಾರಿಗೆ ತರಲಾಗಿಲ್ಲ. ಈಗ ಅದನ್ನು ಮತ್ತೆ ಚರ್ಚಿಸಲಾಗುತ್ತಿದೆ. ನಾಯಕತ್ವ ಏನು ನಿರ್ಧರಿಸುತ್ತದೆ ಎಂಬುದನ್ನು ನಾವು ಕಾಯಬೇಕು ಎಂದು ಅವರು ಹೇಳಿದರು.

ಸಂಪುಟ ವಿಸ್ತರಣೆ ಮತ್ತು ಪುನರ್ರಚನೆಯ ಬಗ್ಗೆ ಮಾತನಾಡಿದ ಜಾರಕಿಹೊಳಿ, ಈಗ ಹೊಸ ಮುಖ್ಯಮಂತ್ರಿ ಇದ್ದಾರೆ, ಸಿದ್ದರಾಮಯ್ಯ ಕೂಡ ಇದ್ದಾರೆ. ಸಂಪುಟ ರಚನೆ ಎರಡು ಹಂತಗಳಲ್ಲಿ ಆಗಬಹುದು. ಹಿರಿಯ ನಾಯಕರು ಮೊದಲ ಪಟ್ಟಿಯಲ್ಲಿ ಸ್ಥಾನ ಪಡೆಯಬಹುದು ಎಂದು ಅವರು ಹೇಳಿದರು.

ಸಿದ್ದರಾಮಯ್ಯ ರಾಜೀನಾಮೆ ನೀಡುವ ಮೊದಲು ಅವರ ವಿರುದ್ಧ 37 ಶಾಸಕರ ಗುಂಪು ಪತ್ರಕ್ಕೆ ಸಹಿ ಹಾಕಿದೆ ಎಂಬ ಆರೋಪಗಳನ್ನು ಜಾರಕಿಹೊಳಿ ಬಲವಾಗಿ ತಿರಸ್ಕರಿಸಿದರು. ಈ ಹೇಳಿಕೆಯನ್ನು ಸಂಪೂರ್ಣವಾಗಿ ಆಧಾರರಹಿತ ಎಂದು ಕರೆದ ಅವರು, ಅಂತಹ ಯಾವುದೇ ಪತ್ರವನ್ನು ಕಾಂಗ್ರೆಸ್ ಹೈಕಮಾಂಡ್‌ಗೆ ಕಳುಹಿಸಲಾಗಿಲ್ಲ ಎಂದು ಹೇಳಿದರು. 37 ಪ್ರಭಾವಿ ಶಾಸಕರು ನಿಜವಾಗಿಯೂ ಅಂತಹ ದಾಖಲೆಗೆ ಸಹಿ ಹಾಕಿದ್ದರೆ, ಅದಕ್ಕೆ ಪುರಾವೆಗಳು ಇರಬೇಕಿತ್ತು. ಅಂತಹ ಯಾವುದೇ ಪತ್ರ ಅಸ್ತಿತ್ವದಲ್ಲಿಲ್ಲ. ಇವು ಕೇವಲ ವದಂತಿಗಳು ಮತ್ತು ಕಟ್ಟುಕಥೆಗಳಾಗಿದ್ದು, ಅವುಗಳಿಗೆ ಅನಗತ್ಯ ಪ್ರಾಮುಖ್ಯತೆ ನೀಡಬಾರದು ಎಂದು ಅವರು ಹೇಳಿದರು.

## ಖಾನಾಪುರದಲ್ಲಿ ಅಕ್ರಮ ಶಸ್ತ್ರಾಸ್ತ್ರ ಜಾಲ ಭೇದಿಸಿದ ಪೊಲೀಸರು: 13 ಮಂದಿ ಬಂಧನ, 9 ಬಂದೂಕು ವಶಕ್ಕೆ..!

**ಬೆಳಗಾವಿ ವಾರ್ತೆ ಬೆಳಗಾವಿ:** ಖಾನಾಪುರ ತಾಲೂಕಿನ ಕತ್ಗಲಿ ಗ್ರಾಮದಲ್ಲಿ ಅಕ್ರಮವಾಗಿ ಬಂದೂಕುಗಳನ್ನು ತಯಾರಿಸಿ ಮಾರಾಟ ಮಾಡುತ್ತಿದ್ದ ಜಾಲವನ್ನು ಖಾನಾಪುರ ಪೊಲೀಸರು ಭೇದಿಸಿದ್ದು, 13 ಮಂದಿ ಯನ್ನು ಬಂಧಿಸಿ 9 ದೇಶೀ ಬಂದೂಕು ಗಳು ಸೇರಿದಂತೆ ಅಪಾರ ಪ್ರಮಾಣದ ಶಸ್ತ್ರಾಸ್ತ್ರ ಸಾಮಗ್ರಿಯನ್ನು ವಶಪಡಿಸಿಕೊಂಡಿದ್ದಾರೆ.

2024ರಿಂದ ಕತ್ಗಲಿ ಗ್ರಾಮದ ಮಾರುತಿ ಶ್ರೀಕಾಂತ್ ಸುತಾರ್ ಎಂಬಾತ ಅಕ್ರಮವಾಗಿ ದೇಶೀ ಬಂದೂಕುಗಳನ್ನು ತಯಾರಿಸಿ ಮಾರಾಟ ಮಾಡುತ್ತಿದ್ದಾನೆ ಎಂಬ ಖಚಿತ ಮಾಹಿತಿ ಪೊಲೀಸರಿಗೆ ಲಭಿಸಿತ್ತು.

ಇದರ ಆಧಾರದ ಮೇಲೆ ಮೇ 11ರಂದು ಸ್ವಯಂಪ್ರೇರಿತ (ಸುಮೋಟು) ಪ್ರಕರಣ ದಾಖಲಿಸಿಕೊಂಡು ಕಾರ್ಯಾಚರಣೆ ನಡೆಸಿದ ಪೊಲೀಸರು, ಮಾರುತಿ ಸುತಾರ್‌ನನ್ನು ಬಂಧಿಸಿ ಆತ ತಯಾರಿಸುತ್ತಿದ್ದ ದೇಶೀ ಬಂದೂಕನ್ನು ವಶಪಡಿಸಿಕೊಂಡರು.

**ತನಿಖೆಯಲ್ಲಿ ಬಯಲಾಯ್ತು ಅಕ್ರಮ ಜಾಲ**

ಮುಂದಿನ ತನಿಖೆಯಲ್ಲಿ ಮಾರುತಿ ಸುತಾರ್‌ನಿಂದ ಅಕ್ರಮ ಶಸ್ತ್ರಾಸ್ತ್ರ ಖರೀದಿಸಿದ್ದ ಎಂಟು ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಅವರಿಂದ ಮತ್ತಷ್ಟು 8 ದೇಶೀ ಬಂದೂಕುಗಳನ್ನು ವಶಪಡಿಸಿಕೊಂಡಿದ್ದಾರೆ.

ಬಂಧಿತರನ್ನು ಮಾರ್ಕಂಡೇಯ ನಗರದ ಸೋಮನಾಥ ಚೌಗುಲೆ, ಸಂತೋಷ ನಾಯಕ್, ಮಾರುತಿ ಗುಡದ್ಯಾಗೋಳ, ಬಾಳು ನಾಯಕ್, ಲಕ್ಷ್ಮಣ ಗುಜನಾಳ ಹಾಗೂ ಮುದಿಕೊಪ್ಪದ ಬಸವರಾಜ ಸಾಲೋಟಗಿ, ಬಸವಂತ ಯಾರ್ಮಲ್ಕರ್ ಮತ್ತು ಲಕ್ಷ್ಮಣ ಗುರವ್ ಎಂದು ಗುರ್ತಿಸಲಾಗಿದೆ.



ಇದೇ ಪ್ರಕರಣದಲ್ಲಿ ಅಕ್ರಮ ಶಸ್ತ್ರಾಸ್ತ್ರ ತಯಾರಿಕೆಗೆ ಆರ್ಥಿಕ ನೆರವು ನೀಡಿದ್ದ ಆರೋಪದಡಿ ಮರಿಯಪ್ಪ ನಾಯಕ್ ಎಂಬಾತನನ್ನೂ ಬಂಧನಕ್ಕೊಳಪಡಿಸಿದ್ದಾರೆ.

**ಬುಕ್‌ಸ್ಟಾಲ್ ಮಾಲೀಕ ಸೇರಿ ಮತ್ತಿಬ್ಬರ ಬಂಧನ**

ಈ ನಡುವೆ ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲೂಕಿನ ರಾಮನಗರದ ಬುಕ್‌ಸ್ಟಾಲ್ ಮಾಲೀಕ ವಿಶ್ವನಾಥ ಅಲಿಯಾಸ್ ಸಂತೋಷ್ ದೇಸಾಯಿ ಅಕ್ರಮ ಶಸ್ತ್ರಾಸ್ತ್ರ ಭಾಗಗಳು ಮತ್ತು ಗುಂಡು–ಸಿಡಿಮದ್ದು ಪೂರೈಸುತ್ತಿದ್ದ ಆರೋಪದ ಮೇಲೆ ಬಂಧನಕ್ಕೊಳಗಾಗಿದ್ದಾನೆ.

ಆತನಿಂದ 21 ಟ್ರಿಗರ್‌ಗಳು, 5 ಗನ್ ಹೆಡ್‌ಗಳು, 15 ನಿಪಲ್‌ಗಳು, 34 ಪ್ಯಾಕೆಟ್ ಗನ್‌ಪೌಡರ್, 449 ಸೀಸದ ಗುಂಡುಗಳು, 420 ಪರ್ಕಷನ್ ಕ್ಯಾಪ್‌ಗಳು, 48 ಜೀವಂತ ಕಾರ್ಟ್ರಿಡ್ಜ್‌ಗಳು ಹಾಗೂ ವೆಲ್ಡಿಂಗ್ ಉಪಕರಣಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಇದಲ್ಲದೆ, ಬೆಳಗಾವಿಯ ಖಂಜರ್ ಗಲ್ಲಿಯಲ್ಲಿರುವ 'ಅವಿಸ್ ಗನ್‌ಶಾಪ್' ಮಾಲೀಕ ವಿಜಯ್ ಅಂಗೋಲ್ಕರ್‌ನನ್ನೂ ಬಂಧಿಸಲಾಗಿದೆ.

2021ರಲ್ಲೇ ಪರವಾನಗಿ ಅವಧಿ ಮುಗಿದಿದ್ದರೂ ಆತ ಅಕ್ರಮವಾಗಿ ಶಸ್ತ್ರಾಸ್ತ್ರ ಸಾಮಗ್ರಿ ಹಾಗೂ ಮದ್ದುಗುಂಡುಗಳನ್ನು ಮಾರಾಟ ಮಾಡುತ್ತಿದ್ದನೆಂದು ತನಿಖೆಯಲ್ಲಿ ತಿಳಿದುಬಂದಿದೆ.

**ವೆಲ್ಡಿಂಗ್ ಅಂಗಡಿ ಮಾಲೀಕನೂ ಅರೆಸ್ಟ್**

ದೇಶೂರ್ ಗ್ರಾಮದ ವೆಲ್ಡಿಂಗ್ ಅಂಗಡಿ ಮಾಲೀಕನೊಬ್ಬ ಬಂದೂಕುಗಳ ಬ್ಯಾರೆಲ್ ವೆಲ್ಡಿಂಗ್ ಮಾಡಿ ಅಕ್ರಮ ಶಸ್ತ್ರಾಸ್ತ್ರ ತಯಾರಿಕೆಗೆ ನೆರವಾಗಿದ್ದಾನೆ ಎಂಬ ಆರೋಪದ ಮೇಲೆ ಆತನನ್ನೂ ಪೊಲೀಸರು ಬಂಧಿಸಿದ್ದಾರೆ. ಆತನಿಂದ ವೆಲ್ಡಿಂಗ್ ಉಪಕರಣಗಳನ್ನು ವಶಪಡಿಸಿಕೊಂಡಿದ್ದಾರೆ

ಎಲ್ಲ 13 ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ನಡೆದ ಈ ಕಾರ್ಯಾಚರಣೆಯನ್ನು ಖಾನಾಪುರ ಪೊಲೀಸ್ ಇನ್ಸ್‌ಪೆಕ್ಟರ್ ಎಲ್.ಎಚ್. ಗೌಂಡಿ ನೇತೃತ್ವದಲ್ಲಿ ಯಶಸ್ವಿಯಾಗಿ ನಡೆಸಲಾಗಿದೆ.


## ಬೆಟಗೇರಿ ಸಿಆರ್‌ಸಿ ವಲಯದ ಶಾಲೆಗಳಲ್ಲಿ ಸ್ವಚ್ಛತಾ ಕಾರ್ಯ.!

* ಎಲ್ಲ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳಿಗೆ ಹೂ ನೀಡಿ, ಸಿಹಿ ಹಂಚಿ ಸ್ವಾಗತ
* ಶಾಲಾ ಪ್ರಾರಂಭೋತ್ಸವದ ಸಕಲ ಸಿದ್ಧತೆ
* ಮಕ್ಕಳಿಗೆ ಮತ್ತು ಪಾಲಕರಿಗೆ ವಿಶೇಷ ಊಟದ ವ್ಯವಸ್ಥೆ

**ವರದಿ: ಅಡಿವೇಶ ಮುಧೋಳ.**

**ಬೆಳಗಾವಿ ವಾರ್ತೆ ಬೆಟಗೇರಿ:** ರಾಜ್ಯಾದ್ಯಂತ ಜೂನ್ 1ರಂದು 2026–27ನೇ ಸಾಲಿನ ಶೈಕ್ಷಣಿಕ ಸಾಲಿನ ಶೈಕ್ಷಣಿಕ ಸಾಲಿನ ಸರ್ಕಾರಿ ಶಾಲೆಗಳು ಪುನರಾರಂಭಗೊಳ್ಳಿರುವ ಹಿನ್ನಲೆಯಲ್ಲಿ ಮೂಡಲಗಿ ಶೈಕ್ಷಣಿಕ ವಲಯದ ಬೆಟಗೇರಿ ಸಿಆರ್‌ಸಿ ವಲಯ ವ್ಯಾಪ್ತಿಯ ಎಲ್ಲ ಸರ್ಕಾರಿ ಹಿರಿಯ ಮತ್ತು ತೋಟದ ಕಿರಿಯ ಪ್ರಾಥಮಿಕ ಕನ್ನಡ ಶಾಲೆಗಳಲ್ಲಿ ಮೇ.30 ಮತ್ತು ಮೇ.31ರಂದು ಶಾಲಾ ಮಕ್ಕಳ ಬರಮಾಡಿಕೊಳ್ಳಲು ಸ್ವಚ್ಛತಾ ಕಾರ್ಯ ಸೇರಿದಂತೆ ಶಾಲಾ ಪ್ರಾರಂಭೋತ್ಸವದ ಸಕಲ ಸಿದ್ಧತೆ ನಡೆದಿದೆ

ಬೆಟಗೇರಿ ಸಿಆರ್‌ಸಿ ವಲಯ ವ್ಯಾಪ್ತಿಯ ಬೆಟಗೇರಿ, ಬಿಲಕುಂದಿ, ತಪಸಿ, ಕೆಮ್ಮನಕೋಲ, ನಿಂಗಾಪೂರ, ಬಗರನಾಳ ಸೇರಿದಂತೆ ಎಲ್ಲ ಸರ್ಕಾರಿ ಹಿರಿಯ ಹಾಗೂ ತೋಟದ ಕಿರಿಯ ಪ್ರಾಥಮಿಕ ಕನ್ನಡ ಶಾಲೆಗಳಲ್ಲಿ ಪ್ರತಿಯೊಂದು ತರಗತಿ ಕೊಠಡಿ, ಹೊರಾಂಗಣ, ಬಿಸಿಯೂಟದ ಕೊಠಡಿ, ಆಟದ ಮೈದಾನ, ಕಾಂಪೌಂಡ್ ಸೇರಿದಂತೆ ಇಡೀ ಶಾಲೆಯನ್ನು ಉತ್ತಮ ರೀತಿಯಲ್ಲಿ ಸ್ವಚ್ಛಗೊಳಿಸುವ ಕಾರ್ಯ ನಡೆದಿದೆ. ಶಾಲಾ ಮಕ್ಕಳ ಬರಮಾಡಿಕೊಳ್ಳುವ ಹಾಗೂ ಶಾಲಾ ಪ್ರಾರಂಭೋತ್ಸವದ ಸಕಲ ಸಿದ್ದತೆ ಜರುಗಿದೆ.




ಶಾಲೆಯ ಪ್ರವೇಶ ದ್ವಾರ, ತರಗತಿ ಕೊಠಡಿಗಳ ಅಲಂಕಾಲ ಸೇರಿದಂತೆ ಶಾಲಾ ಆವರಣದ ಪ್ರಮುಖ ಸ್ಥಳಗಳಲ್ಲಿ ತಳಿರು ತೋರಣ, ರಂಗೋಲಿ ಬಿಡಿಸಿ ಸಿದ್ಧತೆ ಕೆಲಸ ಭರದಿಂದ ಸಾಗಿದೆ.

ಶಾಲಾ ಮಕ್ಕಳಿಗೆ ಹೂ ನೀಡಿ ಸಿಹಿ ಹಂಚುವ ಮೂಲಕ ಶಾಲೆಗೆ ಶಿಕ್ಷಕರು ಬರಮಾಡಿಕೊಳ್ಳುವ ಕಾರ್ಯಕ್ರಮ ನಡೆದ ಬಳಿಕ ಶಾಲಾ ಮಕ್ಕಳಿಗೆ ಪಠ್ಯ ಪುಸ್ತಕ, ಸಮವಸ್ತ್ರ ವಿತರಣೆ ಮಾಡಲಿದ್ದಾರೆ ಎಂದು ಬೆಟಗೇರಿ ಸಿಆರ್‌ಸಿ ವಲಯ ಸಮೂಹ ಸಂಪನ್ಮೂಲ ವ್ಯಕ್ತಿ ಎಮ್.ಬಿ.ನಾಯ್ಕರ ತಿಳಿಸಿದ್ದಾರೆ.

## ಬೆಟಗೇರಿ ಕ್ಲಸ್ಟರ್ ವಲಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಸ್ವಚ್ಛತಾ ಕಾರ್ಯ



**ವರದಿ: ಅಡಿವೇಶ ಮುಧೋಳ.**

**ಬೆಳಗಾವಿ ವಾರ್ತೆ ಬೆಟಗೇರಿ:** ರಾಜ್ಯಾದ್ಯಂತ ಜೂನ್ 1ರಂದು 2026–27ನೇ ಸಾಲಿನ ಶೈಕ್ಷಣಿಕ ಸಾಲಿನ ಸರ್ಕಾರಿ ಶಾಲೆಗಳು ಪುನರಾರಂಭಗೊಳ್ಳಿರುವ ಹಿನ್ನಲೆಯಲ್ಲಿ ಮೂಡಲಗಿ ಶೈಕ್ಷಣಿಕ ವಲಯದ ಬೆಟಗೇರಿ ಕ್ಲಸ್ಟರ್ ವ್ಯಾಪ್ತಿಯ ಎಲ್ಲ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಮೇ.30 ಮತ್ತು ಮೇ.31ರಂದು ಶಾಲಾ ಮಕ್ಕಳ ಬರಮಾಡಿಕೊಳ್ಳಲು ಸ್ವಚ್ಛತಾ ಕಾರ್ಯ ಸೇರಿದಂತೆ ಸಕಲ ಸಿದ್ಧತೆ ನಡೆದಿದೆ.

ಬೆಟಗೇರಿ ಕ್ಲಸ್ಟರ್ ವ್ಯಾಪ್ತಿಯ ಬೆಟಗೇರಿ, ಬಿಲಕುಂದಿ, ಗೋಸಬಾಳ ಸೇರಿದಂತೆ ಎಲ್ಲ ಸರ್ಕಾರಿ ಶಾಲೆಗಳಲ್ಲಿ ಪ್ರತಿಯೊಂದು ತರಗತಿ ಕೊಠಡಿ, ಹೊರಾಂಗಣ, ಬಿಸಿಯೂಟದ ಕೊಠಡಿ, ಆಟದ ಮೈದಾನ, ಕಾಂಪೌಂಡ್ ಸೇರಿದಂತೆ ಇಡೀ ಶಾಲೆಯನ್ನು ಉತ್ತಮ ರೀತಿಯಲ್ಲಿ ಸ್ವಚ್ಛಗೊಳಿಸುವ ಕಾರ್ಯ ನಡೆದು ಶಾಲಾ ಮಕ್ಕಳ ಬರಮಾಡಿಕೊಳ್ಳಲು ಸಕಲ ಸಿದ್ಧತೆ ಜರುಗಿದೆ.

ಶಾಲೆಯ ಪ್ರವೇಶ ದ್ವಾರ, ತರಗತಿ ಕೊಠಡಿಗಳ ಅಲಂಕಾಲ ಸೇರಿದಂತೆ ಶಾಲಾ ಆವರಣದ ಪ್ರಮುಖ ಸ್ಥಳಗಳಲ್ಲಿ ತಳಿರು ತೋರಣ, ರಂಗೋಲಿ ಬಿಡಿಸಿ ಸಿದ್ಧತೆ ಕೆಲಸ ಭರದಿಂದ ಸಾಗಿದೆ. ಶಾಲಾ ಮಕ್ಕಳಿಗೆ ಹೂ ನೀಡಿ ಮತ್ತು ಸಿಹಿ ಹಂಚುವ ಮೂಲಕ ಶಾಲೆಗೆ ಶಿಕ್ಷಕರು ಬರಮಾಡಿಕೊಳ್ಳುವ ಕಾರ್ಯಕ್ರಮ ನಡೆಯಲಿದೆ.

ಶಾಲಾ ಮಕ್ಕಳಿಗೆ ಪಠ್ಯ ಪುಸ್ತಕ, ಸಮವಸ್ತ್ರ ವಿತರಣೆ ಸೇರಿದಂತೆ ಶಾಲೆಯ ಸಮಗ್ರ ಪ್ರಗತಿಗೆ ಹಲವು ವಿಷಯಗಳ ಕುರಿತು ಶಾಲೆಯ ಶಿಕ್ಷಕರೊಂದಿಗೆ ಮುಖ್ಯೋಪಾಧ್ಯಯರು ಮೇ.30 ರಂದು ಶಾಲೆಯಲ್ಲಿ ನಡೆದ ಶಿಕ್ಷಕರ ಸಭೆಯಲ್ಲಿ ಚರ್ಚಿಸಲಾಗಿದೆ. ಪ್ರಸಕ್ತ ಸಾಲಿನ ಶಾಲೆಯ ಎಲ್ಲ ಮಕ್ಕಳಿಗೆ ಮತ್ತು ಪಾಲಕರಿಗೆ ಮಾವಿನ ಹಣ್ಣು ಸಿಕರಣೆ ವಿಶೇಷ ಊಟದ ವ್ಯವಸ್ಥೆಯೊಂದಿಗೆ ಪ್ರಸಕ್ತ ಶಾಲಾ ಪ್ರಾರಂಭೋತ್ಸವವನ್ನು ಅದ್ಧೂರಿಯಾಗಿ ಮಾಡಲಾಗುವುದು ಎಂದು ಬೆಟಗೇರಿ ವಿವಿಡಿ ಸರ್ಕಾರಿಪ್ರೌಢ ಶಾಲೆಯ ಮುಖ್ಯೋಪಾಧ್ಯಯ ರಮೇಶ ಅಳಗುಂಡಿ ತಿಳಿಸಿದ್ದಾರೆ.

## ಜಾನಪದ ಜಾತ್ರೆ, ಪ್ರಶಸ್ತಿ ವಿತರಣಾ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡದ ಚರಂತಿಮಠ ಗಾರ್ಡನ್ ಸಮುದಾಯ ಭವನದಲ್ಲಿ ನಾಟ್ಯ ಬೈರವಿ ಕಲಾ ಅಕಾಡೆಮಿ ಸಹಯೋಗದೊಂದಿಗೆ ಆಯೋಜಿಸಲಾದ ಜಾನಪದ ಜಾತ್ರೆ, ಜಿಲ್ಲಾ ಮಟ್ಟದ ವೈಯಕ್ತಿಕ ಕಿರಿಯರ ನೃತ್ಯ ಸ್ಪರ್ಧೆ ಹಾಗೂ ನಾಟ್ಯ ಕಲಾಶ್ರೀ ಪ್ರಶಸ್ತಿ ವಿತರಣಾ ಕಾರ್ಯಕ್ರಮ ವನ್ನು ಸರ್ವಧರ್ಮ ಸಮಾಜ ಸೇವಕ ಡಾ.ರಮೇಶ್ ಮಹಾದೇವಪ್ಪನವರ ಉದ್ಘಾಟಿಸಿದರು.

ಜಾನಪದ ಕಲೆ, ಸಂಸ್ಕೃತಿ ಮತ್ತು ನೃತ್ಯ ಪರಂಪರೆಯನ್ನು ಉಳಿಸಿ ಬೆಳೆಸುವ ಇಂತಹ ಕಾರ್ಯಕ್ರಮಗಳು ನಮ್ಮ ಯುವ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವುದರ ಜೊತೆಗೆ, ನಮ್ಮ ಸಾಂಸ್ಕೃತಿಕ ವೈಭವವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಮಹತ್ವದ ಕಾರ್ಯ ಮಾಡುತ್ತವೆ ಎಂದರು.

ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ಪುಟಾಣಿ ನೃತ್ಯಪಟುಗಳ ಅದ್ಭುತ ಪ್ರದರ್ಶನಗಳು ಮನಸೂರೆಗೊಂಡವು.

ಈ ಸಂದರ್ಭದಲ್ಲಿ ಸತೀಶ್ ತುರುಮರಿ, ಶ್ರೀಮತಿ ಪುಷ್ಪ ನವಲಗುಂದ್, ಶ್ರೀಮತಿ ಸೀಮಾ ಸಾಣಿಕೊಪ್ಪ, ಡಾ. ಪ್ರಕಾಶ್ ಮಲ್ಲಿಗವಾಡ, ಡಾ. ಪ್ರಕಾಶ್



ಕ್ಷತ್ರಿಯ, ಸಂಜೀವ್ ಕುಂದಗೋಳ ಸೇರಿದಂತೆ ಹಲವಾರು ಗಣ್ಯರು, ಕಲಾಭಿಮಾನಿಗಳು ಹಾಗೂ ನೃತ್ಯಪಟುಗಳು ಇದ್ದರು.

# ಜ್ಞಾನ ಕೊಡುವ ಸಾತ್ವಿಕ ಪುರಾಣ ಭಾಗವತ



**ಬೆಳಗಾವಿ ವಾರ್ತೆ ಸತ್ತೂರು:** ಭಾಗವತ 12 ಸ್ಕಂದಗಳಿಂ ದ,18,000 ಶ್ಲೋಕಗಳಿಂದ ಯುಕ್ತನಾದ ಈ ಗ್ರಂಥ, ದೇವರ ಬಗ್ಗೆ ಸರಿಯಾದ ಜ್ಞಾನ ಕೊಡುವ ಸಾತ್ವಿಕ ಪುರಾಣ. ಈ ಲೋಕದ ಅಶಾಶ್ವತೆಯನ್ನು ತಿಳಿಸಿ, ವೈರಾಗದತ್ತ ನಮ್ಮನ್ನೆಲ್ಲ ಕರೆದೊಯ್ಯುತ್ತದೆ, ಪರಮಾತ್ಮನಲ್ಲಿ ಭಕ್ತಿ ಸ್ಥಿರವಾಗಿ ನಿಲ್ಲುತ್ತದೆ ಎಂದು ಡಾ. ಭೀಮಸೇನಾಚಾರ್ಯ ಮಳಗಿಯವರು ತಿಳಿಸಿದರು.

ಸತ್ತೂರಿನ ನಾರಾಯಣ ಪಾರಾಯಣ ಬಳಗದ ಆಶ್ರಯದಲ್ಲಿ ಅಧಿಕ ಮಾಸದಲ್ಲಿ, ಎರಡನೇ ಭಾಗವತ ಸಪ್ತಾಹದ ಮಂಗಳೋತ್ಸವದಲ್ಲಿ ಭಾಗವಹಿಸಿ ಮಾತನಾಡುತ್ತಾ, ಶ್ರೀ ವೇದವ್ಯಾಸ ದೇವರಿಂದ ರಚಿತವಾದ ಈ ಭಾಗವತ, ರಚನೆಯ ಕ್ರಮದಲ್ಲಿಯೂ ಕೊನೆಯ ಪುರಾಣವಾಗಿದ್ದು, ಸಮಸ್ತ ಜೀವ ರಾಶಿಗಳಿಗೆ ಭಗವಂತನ ಬಗ್ಗೆ ತಿಳಿಸಿಕೊ ಡುವ, ಸುಂದರವಾಗಿ ನಿರೂಪಿಸುವ ಹಾಗೂ ಎಲ್ಲ ಪುರಾಣಗಳ ಸಾರ ಸಂಗ್ರಹವು ಇದ್ದ ಕಾರಣ, ಪುರಾಣಗಳ ರಾಜ ಶ್ರೀಮದ್ ಭಾಗವತ ಎಂದು ಹೇಳಲ್ಪಟ್ಟಿದೆ. ಈ ಗ್ರಂಥದ ಪಾರಾಯಣ, ಶ್ರವಣ, ಮನನ ಮುಂತಾದವುಗಳಿಂದ ಶ್ರೀ ಹರಿಯ ವಿಶೇಷ ಅನುಗ್ರಹಕ್ಕೆ ಪಾತ್ರರಾಗುವುದರಲ್ಲಿ ಸಂದೇಹವಿಲ್ಲವೆಂದು, ಲೌಕಿಕ ಉದಾಹರಣೆಗಳೊಂದಿಗೆ ಸ್ವಾರಸ್ಯಕರವಾಗಿ ತಿಳಿಸಿಕೊಟ್ಟರು.

ಈ ಕಾರ್ಯಕ್ರಮದ ಪೂರ್ವದಲ್ಲಿ ಬಳಗದ ಸದಸ್ಯರಿಂದ ಶ್ರೀ ಹರಿ ವಾಯು ಗುರುಗಳ ಸ್ತೋತ್ರಗಳ ಪಾರಾಯಣ ಮತ್ತು ನಾರಾಯಣಿ ಭಜನಾ ಮಂಡಳಿ ಅವರಿಂದ 33 ತಾರತಮ್ಯ ದೇವರನಾಮಗಳನ್ನು ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಕೃಷ್ಣ ಹುನಗುಂದ, ರಘೋತ್ತಮ ಅವಧಾನಿ, ಕೃಷ್ಣ ಹುನಗುಂದ, ಡಾ. ಶ್ರೀನಾಥ, ಗಿರೀಶ್ ಶಿರೋಳ, ಡಾ. ರವಿ ದುಮ್ಮವಾಡ, ವಿಠಲ ಅಂಬೇಕರ, ಎಸ್. ವಿ. ಪಟ್ಟಣಕೋಡಿ ,ಸಂಜೀವ ಗೋಳಸಂಗಿ, ಪಾಂಡುರಂಗ ಕುಲಕರ್ಣಿ,ಎಲ್ .ವಿ. ಜೋಶಿ, ವೆಂಕಟೇಶ ಶಿರೋಳ, ಹನುಮಂತ ಪುರಾಣಿಕ, ವಿಲಾಸ ಸಬನೀಸ, ವಿನಾಯಕ ಗುರು ನಾಥ ಸರ್ದೇಶ್ಮುಖ, ಸಂಜೀವ್ ಜೋಶಿ, ವಿಶ್ವನಾಥ ಕೆ, ಕೇಶವ ಕುಲಕರ್ಣಿ, ಡಿಕೆ ಜೋಶಿ, ಪ್ರಕಾಶ ದೇಸಾಯಿ, ಆನಂದ ದೇಶಪಾಂಡೆ, ಬಹದ್ದೂರ ದೇಸಾಯಿ, ಅನಿಲ ದೇಶಪಾಂಡೆ, ನಾಗೇಶ ನರಸಾಪುರ, ಬದ್ರಿನಾಥ ಬೆಟಗೇರಿ ಮುಂತಾದವರು ಉಪಸ್ಥಿತರಿದ್ದರು.

# ಆರ್‌ಸಿಬಿ ಅಭಿಮಾನಿಗಳ ಅದ್ದೂರಿ ಸಂಭ್ರಮಾಚರಣೆ

**ಬೆಳಗಾವಿ ವಾರ್ತೆ ಧಾರವಾಡ (ನವಲಗುಂದ):** ಐಪಿಎಲ್ ಪ್ರಯುಕ್ತ ಪಟ್ಟಣದ ಗಾಂಧಿ ಮಾರುಕಟ್ಟೆಯಲ್ಲಿ ಬೃಹದಾಕಾರದ ಎಲ್‌ಸಿಡಿ ಟಿವಿಯನ್ನು ಅಳವಡಿಸಿ, ಆರ್‌ಸಿಬಿ ಅಭಿಮಾನಿಗಳು ಕ್ರಿಕೆಟ್ ಹಬ್ಬವನ್ನು ಅದ್ದೂರಿಯಾಗಿ ಆಚರಿಸಿದರು.

ಪಂದ್ಯ ಆರಂಭಕ್ಕೂ ಮುನ್ನವೇ ಅಭಿಮಾನಿಗಳು ಟಿವಿಗೆ ಪೂಜೆ ಪುನಸ್ಕಾರ ನೆರವೇರಿಸಿ, ಆರ್‌ಸಿಬಿ ತಂಡ ಗೆಲುವು ಸಾಧಿಸಲಿ ಎಂದು ದೇವರಲ್ಲಿ ಪ್ರಾರ್ಥಿಸಿದರು. ಬಳಿಕ ಸಾವಿರಾರು ಸಂಖ್ಯೆಯಲ್ಲಿ ಅಭಿಮಾನಿಗಳು ಒಂದೇ ಸ್ಥಳದಲ್ಲಿ ಸೇರಿ ಪಂದ್ಯವನ್ನು ಉತ್ಸಾಹಭರಿತವಾಗಿ ವೀಕ್ಷಿಸಿದರು.

ಪಂದ್ಯದ ವೇಳೆ ವಿರಾಟ್ ಕೊಹ್ಲಿ ಅವರ ಆರ್ಭಟದ ಬ್ಯಾಟಿಂಗ್ ಅಭಿಮಾನಿಗಳಲ್ಲಿ ಉತ್ಸಾಹ ತುಂಬಿತು. ಪ್ರತಿಯೊಂದು ಸಿಕ್ಸ್ ಹಾಗೂ ಫೋರ್‌ಗೆ



ಅಭಿಮಾನಿಗಳು ಕೂಗಾಟಗಳೊಂದಿಗೆ ಹರ್ಷ ವ್ಯಕ್ತಪಡಿಸಿದರು.

ಇನ್ನು ತಂಡದ ಗೆಲುವು ಸಮೀಪಿಸುತ್ತಿದ್ದಂತೆ ಅಭಿಮಾನಿಗಳಲ್ಲಿ ಹರ್ಷೋದ್ಗಾರ ಮೆರೆಯಿತು. ಪಟಾಕಿ, ರಾಕೆಟ್ ಸಿಡಿಸಿ ಸಂಭ್ರಮಿಸಿದ ಅಭಿಮಾನಿಗಳು ವಿಜಯೋತ್ಸವವನ್ನು ಅದ್ದೂರಿಯಾಗಿ ಆಚರಿಸಿದರು.

ಇದೇ ವೇಳೆ ನಗರದ ದೇಸಾಯಿ ಪೇಟೆ ಓಣಿಯಲ್ಲಿಯೂ ಅಭಿಮಾನಿಗಳು ಕೇಕ್ ಕಟ್ ಮಾಡಿ, ಪಟಾಕಿ ಸಿಡಿಸಿ ಸಂಭ್ರಮಾಚರಣೆ ನಡೆಸಿದರು. ಯುವಕರು ತಂಡದ ಗೆಲುವನ್ನು ಹರ್ಷೋದ್ಗಾರಗಳೊಂದಿಗೆ ಆಚರಿಸಿ ಹಬ್ಬದ ವಾತಾವರಣ ನಿರ್ಮಿಸಿದರು. ಈ ಸಂದರ್ಭದಲ್ಲಿ ಸಾವಿರಾರು ಆರ್‌ಸಿಬಿ ಅಭಿಮಾನಿಗಳು ಪಾಲ್ಗೊಂಡು, ಪಟ್ಟಣದಲ್ಲಿ ಸಂಭ್ರಮದ ವಾತಾವರಣ ಉಂಟುಮಾಡಿದರು.

# ನಕಲಿ ಫೇಸ್‌ಬುಕ್ ಖಾತೆಯಿಂದ ಜಾರಕಿಹೊಳಿ ವಿರುದ್ಧ ಪೋಸ್ಟ್: ದೂರು

**ಬೆಳಗಾವಿ ವಾರ್ತೆ ಬೆಳಗಾವಿ:** 'ಕರುನಾಡ ಕುರುಬಗೌಡ್ರು' ಹಾಗೂ 'ಬಂಡಾಯ ಧ್ವನಿ' ಹೆಸರಿನ ನಕಲಿ ಫೇಸ್‌ಬುಕ್ ಖಾತೆಗಳ ಮೂಲಕ ಮಾಜಿ ಸಚಿವ ಸತೀಶ್ ಜಾರಕಿಹೊಳಿ ವಿರುದ್ಧ ಅವಹೇಳನಕಾರಿ ಹಾಗೂ ಸುಳ್ಳು ಪೋಸ್ಟ್ ಹಾಕಲಾಗಿದೆ ಎಂದು ಆರೋ ಪಿಸಿ ವಾಲ್ಮೀಕಿ ಸಮಾಜದ ಮುಖಂಡ ರಾಜಶೇಖರ ತಳವಾರ ಅವರು ಬೆಳಗಾವಿ ಸೈಬರ್ ಕ್ರೈಂ ಠಾಣೆಗೆ ದೂರು ನೀಡಿದ್ದಾರೆ.

ನಕಲಿ ಖಾತೆಯಲ್ಲಿ, 'ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಸಿದ್ದರಾಮಯ್ಯ ವಿರುದ್ಧ 37 ಶಾಸಕರಿಂದ ಸತೀಶ್ ಜಾರಕಿಹೊಳಿ ಸಹಿ ಸಂಗ್ರಹಿಸಿದ್ದಾರೆ' ಎಂಬ ಗಂಭೀರ ಆರೋಪ ಮಾಡಲಾಗಿದೆ.



ಆದರೆ, ಈ ಆರೋಪವನ್ನು ಸ್ವತಃ ಸತೀಶ್ ಜಾರಕಿಹೊಳಿ ಅವರು ನಿರಾಕರಿಸಿದ್ದಾರೆ. ಅವರ ರಾಜಕೀಯ ಗೌರವಕ್ಕೆ ಧಕ್ಕೆ ತರುವ ಉದ್ದೇಶದಿಂದಲೇ ಇಂತಹ ಸುಳ್ಳು ಸುದ್ದಿ ಹರಡಲಾಗುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

**ಈ ಪೋಸ್ಟ್ ಕೇವಲ ವ್ಯಕ್ತಿಗತ ಅವಹೇಳನವಲ್ಲ;** ಕುರುಬ ಮತ್ತು ವಾಲ್ಮೀಕಿ ಸಮಾಜಗಳ ನಡುವೆ ಗೊಂದಲ, ಅವಿಶ್ವಾಸ ಹಾಗೂ ಭಿನ್ನಾಭಿಪ್ರಾಯ ಮೂಡಿಸುವ ಪ್ರಯತ್ನವಾಗಿದೆ ಎಂದು ತಳವಾರ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದ ಮೂಲಕ ಸುಳ್ಳು ಸುದ್ದಿಗಳನ್ನು ಹರಡಿ ಸಾರ್ವಜನಿಕ ಶಾಂತಿಗೆ ಧಕ್ಕೆ ತರುವ ಸಂಚು ಇದರ ಹಿಂದೆ ಇದೆ ಎಂದು ಅವರು ಹೇಳಿದ್ದಾರೆ.

ನಕಲಿ ಫೇಸ್‌ಬುಕ್ ಖಾತೆಗಳನ್ನು ಸೃಷ್ಟಿಸಿದವರು ಹಾಗೂ ಅವಹೇಳನಕಾರಿ ಪೋಸ್ಟ್ ಹಾಕಿದವರನ್ನು ತಕ್ಷಣ ಪತ್ತೆಹಚ್ಚಿ, ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ರಾಜಶೇಖರ ತಳವಾರ ಅವರು ಸೈಬರ್ ಕ್ರೈಂ ಪೊಲೀಸರನ್ನು ಒತ್ತಾಯಿಸಿದ್ದಾರೆ.

# ಪ್ರತಿಭಾ ಪುರಸ್ಕಾರ, ಸನ್ಮಾನ ಸಮಾರಂಭ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ದೇವಾಂಗ ನೌಕರರ ಸಂಘದ ವತಿಯಿಂದ ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭ ಜರಗಿತು.

ಸಮಾರಂಭದಲ್ಲಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಉನ್ನತ ಅಂಕಗಳನ್ನು ಗಳಿಸಿದ ವಿದ್ಯಾರ್ಥಿ ವಿದ್ಯಾರ್ಥಿನಿಯರನ್ನು ಹಾಗೂ ನಿವೃತ್ತ ನೌಕರರನ್ನು ಸನ್ಮಾನಿಸಲಾಯಿತು.

ಜಿಲ್ಲಾ ದೇವಾಂಗ ನೌಕರ ಸಂಘದ ಅಧ್ಯಕ್ಷರಾದ ರಾಘವೇಂದ್ರ ಕೊಪ್ಪಳವರು ಮಾತನಾಡಿ, ದೇವಾಂಗ ಸಮಾಜ ಶೈಕ್ಷಣಿಕ ಪ್ರಗತಿಗೆ ಹೆಚ್ಚು ಒತ್ತು ನೀಡಬೇಕು, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಹೆಚ್ಚು ಆಸಕ್ತಿ ವಹಿಸಿ ಓದಿಗೆ ಗಮನಕೊಡಬೇಕು, ವಿದ್ಯಾರ್ಥಿ ಜೀವನವನ್ನು ಉತ್ತಮವಾಗಿ ರೂಪಿಸಿಕೊಂಡು ತಂದೆ ತಾಯಿಗಳಿಗೆ ಮತ್ತು ಸಮಾಜಕ್ಕೆ ಗೌರವವನ್ನು ತರಬೇಕು ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಮರೇಶ್ವರ ಹುಲಗೂರ ವಹಿಸಿದ್ದರು ಉಪನ್ಯಾಸಕ ಶಿವಾನಂದ ಕಲ್ಲೂರ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಸುಭಾಷ್ ಹುಲಗೂರ, ಬಾಲಚಂದ್ರ ಹಾಳಕೇರಿ, ಜುಂಜಪ್ಪ ಅಗಡಿ, ಪ್ರಭಾಕರ ಕರ್ಜಗಿ, ಸುಮಂಗಲಾ ದೇವಾಂಗಮಠ, ಸೋಮಣ್ಣ ಡಾಣಗಲ್ಲ, ರಾಮಣ್ಣ ಲಮಾಣಿ, ರಂಜನ್ ಪಾಟೀಲ್, ರಾಜರತ್ನ ಹುಲಗೂರು ಸೇರಿದಂತೆ ಅನೇಕರಿದ್ದರು. ಇದೇ ಸಂದರ್ಭದಲ್ಲಿ ನಿವೃತ್ತ ನೌಕರರನ್ನು ಪದನ್ನೋತಿ ಗೊಂಡ ನೌಕರರನ್ನು ಸನ್ಮಾನಿಸಲಾಯಿತು.

ನಾರಾಯಣ ಹುಲಗೂರ, ಶಿವಾನಂದ ಅಸುಂಡಿ, ಈರಣ್ಣ ಅಂಗಡಿ, ಶಂಕರ್ ಶಿರಹಟ್ಟಿ ನಿರ್ವಹಿಸಿದರು.

# ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್ ವತಿಯಿಂದ ಜೂ. 14 ರಂದು ರಾಜ್ಯ ಮಟ್ಟದ ವಧು ವರರ ಉಚಿತ ಸಮಾವೇಶ



**ಬೆಳಗಾವಿ ವಾರ್ತೆ ಗದಗ:** ನಗರದ ಗಾಣಿಗ ಭವನದಲ್ಲಿ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್ ಜಿಲ್ಲೆಯ ಎಲ್ಲಾ ತಾಲೂಕಿನ ಸಮಾಜ ಬಾಂಧವರ ಸಹಕಾರ ದೊಂದಿಗೆ ರಾಜ್ಯ ಮಟ್ಟದ ವಧು-ವರರ ಉಚಿತ ಸಮಾವೇಶ 14-06-2026ರಂದು ಬೆಳಿಗ್ಗೆ 9ಕ್ಕೆ ಹಮ್ಮಿಕೊಳ್ಳಲಾಗಿದೆ.

ಕಳೆದ ಹಲವಾರು ವರ್ಷಗಳಿಂದ ಗದಗ ಜಿಲ್ಲಾ ಗಾಣಿಗ ಸಂಘವು ಸಮಾಜಕ್ಕೆ ಉಪಯುಕ್ತವಾದ ರಚನಾತ್ಮಕ ಕಾರ್ಯಕ್ರಮಗಳನ್ನು ಏರ್ಪಡಿಸುತ್ತ ಬಂದಿದೆ ಈಗಾಗಲೇ ರಾಜ್ಯಮಟ್ಟದ ವಧು-ವರರ ಸಮಾವೇಶಗಳನ್ನು ಯಶಸ್ವಿಯಾಗಿ ವ್ಯವಸ್ಥಿತವಾಗಿ ನೆರವೇರಿಸಿದೆ. ಇಂದಿನ ದಿನಗಳಲ್ಲಿ ವಧು ವರರ ಸಮಾವೇಶವು ಸಮಾಜ ಭಾಂದವರಿಗೆ ಅತ್ಯಂತ ಅವಶ್ಯ ಎಂಬುದು ಎಲ್ಲರಿಗೂ ಗೊತ್ತಿರುವ ವಿಷಯವಾಗಿದೆ.

ಆದ್ದರಿಂದ ರಾಜ್ಯ ಮಟ್ಟದ ವಧು ವರರ ಉಚಿತ ಸಮಾವೇಶದಲ್ಲಿ ಭಾಗವಹಿಸಲು ಇಚ್ಛಿಸುವ ಗಾಣಿಗ ಸಮಾಜ ಬಾಂಧವರು 10-06-2026ರ ಒಳಗಾಗಿ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಫೋಟೋ, ಆಧಾರ ಕಾರ್ಡ್ ಹಾಗೂ ಬಯೋಡೆಟಾ ಲಗತ್ತಿಸಿ ಎಲ್ಲ ವಿವರಗಳೊಂದಿಗೆ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಸಮಾವೇಶದಲ್ಲಿ ಭಾಗವಹಿಸುವ ವಧು-ವರರ ಜೊತೆಗೆ ಇಬ್ಬರಿಗೆ ಮಾತ್ರ ಅವಕಾಶ ಇರುತ್ತದೆ. ನೊಂದಾಯಿಸುವವರು ಮೊಬೈಲ್ ಸಂಖ್ಯೆ 9741648546, 95910 66921, 9880369245, ಸಂಪರ್ಕಿಸಬಹುದು ಎಂದು ಟ್ರಸ್ಟ್‌ನ ಅಧ್ಯಕ್ಷ ಬಸವರಾಜ ಬಿಂಗಿ, ಕಾರ್ಯದರ್ಶಿ ಮರುಗೇಶ ಬಡ್ನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೋಟರಿ ಗದಗ ಸೆಂಟ್ರಲ್ ನಿಂದ ಚಾರ್ಟರ್ಸ್ ಡೇ ಆಚರಣೆ

**ಬೆಳಗಾವಿ ವಾರ್ತೆ ಗದಗ:** ನಗರದ ರೋಟರಿ ಗದಗ ಸೆಂಟ್ರಲ್ ವತಿಯಿಂದ ಸೇವಾಲಾಲ ನಗರದಲ್ಲಿನ ರೋಟರಿ ಭವನದಲ್ಲಿ ಚಾರ್ಟರ್ ಡೇ ಆಚರಿಸಲಾಯಿತು.

ಅಧ್ಯಕ್ಷತೆಯನ್ನು ರೋಟರಿ ಅಧ್ಯಕ್ಷ ಚೇತನ ಅಂಗಡಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶಿರ್ಶಿಯ ಪ್ರಸಿದ್ದ ಮಕ್ಕಳ ತಜ್ಞ ವೈದ್ಯರಾದ ರೊ. ಡಾ.ದಿನೇಶ ಆರ್ ಹೆಗಡೆ ಮತ್ತು ರೋಟರಿ ಗದಗ್ ರೆವಿನ್ಯೂ ಡಿಸ್ಟ್ರಿಕ್ಟ್ 3170ರ ಅಸಿಸ್ಟೆಂಟ್ ಗವರ್ನರ್ ವಿ.ಕೆ.ಗುರುಮಠ ಆಗಮಿಸಿದ್ದರು. ಕೇಕ್ ಕತ್ತರಿಸುವ ಮೂಲಕ ಚಾರ್ಟರ್ಸ್ ಡೇ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಡಾ.ದಿನೇಶ ಹೆಗಡೆಯವರು ರೋಟರಿಯ ಮಹತ್ವ ಮತ್ತು ತಾವು ವೈದ್ಯರಾಗಿ ರೋಟರಿಯಲ್ಲಿ ಸಲ್ಲಿಸುವ ಸೇವೆಯ ಕುರಿತು ಕೆಲವು ಆಕಸ್ಮಿಕ ಒದಗುವ ಸಂದರ್ಭಗಳನ್ನು ನಿಭಾಯಿಸಿ ಸೇವಾ ಮನೋಭಾವ ಸಾರ್ಥಕ ಪಡಿಸಿಕೊಂಡಿದ್ದನ್ನು ಹೇಳಿದರು. ಗುರುಮಠ ಮತ್ತು ಅಧ್ಯಕ್ಷ



ಚೇತನ ಅಂಗಡಿಯವರು ಚಾರ್ಟರ್ ಡೇ ಮಹತ್ವ, ಆಚರಣೆಗೆ ಬಂದ ಹಿನ್ನಲೆ ಕುರಿತು ಮಾತನಾಡಿದರು. ರೋಟರಿ ಪರಿವಾರದ ದಂಪತಿಗಳಿಗೆ ಫನ್ ಗೇಮ್ಸ್ ನಡೆದು ವಿಜೇತರಿಗೆ ಬಹುಮಾನ ವಿತರಿಸಲಾಯಿತು, ನಂತರ ಮಿಮಿಕ್ರಿ ಶೋ ಜರುಗಿತು. ಕಾರ್ಯಕ್ರಮದಲ್ಲಿ ಕಾರ್ಯ ದರ್ಶಿ ರಾಜು ಉಮ್ನಾಬಾದಿ, ಖಜಾಂಚಿ ಡಾ. ಪ್ರಭು ಗಂಜಿಹಾಳ, ಮಾಜಿ ಅಸಿಸ್ಟಂಟ್ ಗವರ್ನರ್ ಎಂ.ಸಿ.ಐಲಿ, ಸುರೇಶ ಅಬ್ಬಿಗೇರಿ, ಲಿಂಗರಾಜು ಗುಡಿಮನಿ, ವಿಜಯ ಕುಮಾರ ಹಿರೇಮಠ, ಶ್ರೀಕಾಂತ ಲಕ್ಕುಂಡಿ, ಮಂಜುನಾಥ ಬೇಲೇರಿ, ಎಸ್.ಆಯ್. ಅಣ್ಣಿಗೇರಿ, ಪರಶುರಾಮ ನಾಯ್ಕರ್, ರಾಜಣ್ಣ ಮುಧೋಳ, ರಾಜು ಕುರಡಗಿ, ಪ್ರಕಾಶ ಉಗಲಾಟ, ಆರ್.ಬಿ.ದಾನಪ್ಪಗೌಡ್ರ , ಚಂದ್ರಗೌಡ ಹಿರೇಗೌಡರ, ಶಶಿಧರ ದಿಂಡೂರ , ಮಲ್ಲಿಕಾರ್ಜುನ ಚಂದಪ್ಪನ ವರ, ಮಂಜುನಾಥ ಕಬಾಡಿ, ಹಾಗೂ ರೋಟರಿ ಸದಸ್ಯರು ಮತ್ತು ಪರಿವಾರದವರು ಉಪಸ್ಥಿತರಿದ್ದರು.

# ನಿವೃತ್ತಿ ಬೀಳ್ಕೊಡುವ ಸಮಾರಂಭ



**ಬೆಳಗಾವಿ ವಾರ್ತೆ** ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಕೆಎಂಸಿಆರ್ ಐ ಆಸ್ಪತ್ರೆಯ ನಿರ್ದೇಶಕರಾಗಿದ್ದ ಡಾ. ಈಶ್ವರ ಹೊಸಮನಿ ಅವರು ಸೇವಾ ನಿವೃತ್ತಿ ಹೊಂದಿದ ಹಿನ್ನಲೆ ಸೇವಾ ನಿವೃತ್ತಿ ಬೀಳ್ಕೊಡುವ ಸಮಾರಂಭ ಮತ್ತು ಅಭಿನಂದನಾ ಸಮಾರಂಭ ಆಯೋಜಿಸಿದ ಸಂದರ್ಭದಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಸ್ವಾಭಿಮಾನ ದಲಿತ ಸಂಘರ್ಷ ರಾಜ್ಯ ಸಮಿತಿ ಅಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ಚಲವಾದಿ ಬಲಗೈ ಸಮುದಾಯಗಳ ಒಕ್ಕೂಟದ ಮುಖಂಡರಾದ ಚಂದ್ರಶೇಖರ ಯಾತಗೇರಿ ಅವರು ಸನ್ಮಾನಿಸಿ ಗೌರವಿಸಿದರು. ಈ ವೇಳೆ ಕೆಎಂಸಿಆರ್ ಐ ಆಸ್ಪತ್ರೆಯ ನೌಕರರ ಸಂಘದ ಅಧ್ಯಕ್ಷ ಕಾಶಿನಾಥ ಚಲವಾದಿ, ಗುರುನಾಥ ಚಲವಾದಿ, ಮಂಜುನಾಥ ದೇವದುರ್ಗ, ಶಿವಪ್ಪ ಚಲವಾದಿ ಸೇರಿದಂತೆ ಮೊದಲಾದವರು ಉಪಸ್ಥಿತಿ ಇದ್ದರು.

# Natgrid ತಂತ್ರಜ್ಞಾನ: 4 ವರ್ಷಗಳ ಬಳಿಕ ಬೆಳಗಾವಿ ರೈತ ಗುಜರಾತ್‌ನಲ್ಲಿ ಪತ್ತೆ

**ಬೆಳಗಾವಿ ವಾರ್ತೆ ಬೆಳಗಾವಿ:** ನಾಲ್ಕು ವರ್ಷಗಳ ಹಿಂದೆ ನಾಪತ್ತೆಯಾಗಿದ್ದ ರೈತನೊಬ್ಬನನ್ನು ಗುಜರಾತ್ ರಾಜ್ಯದಲ್ಲಿ ಪತ್ತೆಹಚ್ಚುವ ಮೂಲಕ ಹಾರೂಗೇರಿ ಪೊಲೀಸರು ಹಳೆಯ ಪ್ರಕರಣವೊಂದನ್ನು ಯಶಸ್ವಿಯಾಗಿ ಬಗೆಹರಿಸಿದ್ದಾರೆ. ರಾಯಬಾಗ ತಾಲ್ಲೂಕಿನ ಹಾರೂಗೇರಿ ಹಿರೇಹಳ್ಳ ತೋಟದ ನಿವಾಸಿಯಾಗಿರುವ ಅಬ್ದುಲಗಣಿ ಗೌಸ್ ಪೆಂಡಾರಿ ಅಲಿಯಾಸ್ ಜಮಾದಾರ ಅವರು 2020ರಲ್ಲಿ ಮನೆಯಿಂದ ಹೊರಟು ಕಾಣೆಯಾಗಿದ್ದರು.

2020ರ ಜನವರಿ 19ರಂದು ಮನೆಯಿಂದ ಯಾರಿಗೂ ಯಾವುದೇ ಮಾಹಿತಿ ನೀಡದೆ ತೆರಳಿದ್ದ ಅಬ್ದುಲಗಣಿ ಅವರ ಬಗ್ಗೆ ಕುಟುಂಬಸ್ಥರು ಸಾಕಷ್ಟು ಹುಡುಕಾಟ ನಡೆಸಿದರೂ ಸುಳಿವು ಸಿಕ್ಕಿರಲಿಲ್ಲ. ಬಳಿಕ ಮಾರ್ಚ್ 18ರಂದು ಹಾರೂಗೇರಿ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಲಾಗಿತ್ತು.

**ಸುಳಿವು ಸಿಗದೆ ಬಾಕಿ ಉಳಿದಿದ್ದ ಪ್ರಕರಣ:** ಪ್ರಕರಣ ದಾಖಲಾದ ಬಳಿಕ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ನಡೆಸಿದ್ದರು. ಆದರೆ ಯಾವುದೇ ಸ್ಪಷ್ಟ ಮಾಹಿತಿ ಅಥವಾ ಸುಳಿವು ದೊರೆಯದ ಕಾರಣ ಪ್ರಕರಣವನ್ನು 'ಸಿ ನಾಪತ್ತೆ' (C Missing) ಎಂದು ದಾಖಲಿಸಿ ಬಾಕಿ



ಉಳಿಸಲಾಗಿತ್ತು. ಕಾಲಕ್ರಮೇಣ ಪ್ರಕರಣ ಹಳೆಯದಾದರೂ, ಕುಟುಂಬದವರಿಗೆ ಮಾತ್ರ ಅಬ್ದುಲಗಣಿ ಅವರ ಬಗ್ಗೆ ಯಾವುದೇ ಮಾಹಿತಿ ಸಿಗದೆ ಆತಂಕ ಮುಂದುವರಿದಿತ್ತು.

**ನ್ಯಾಟ್‌ಗ್ರಿಡ್ (Natgrid) ತಂತ್ರಜ್ಞಾನದಿಂದ ದೊರಕಿದ ಮಹತ್ವದ ಸುಳಿವು :** ಇತ್ತೀಚೆಗೆ ಹಳೆಯ ನಾಪತ್ತೆ ಪ್ರಕರಣಗಳ ಮರುಪರಿಶೀಲನೆ ಕೈಗೊಂಡ ಹಾರೂಗೇರಿ ಪೊಲೀಸರು, ಕೇಂದ್ರದ ಓಚಿಣರಿಡಿiಜ (National Intelligence Grid) ತಂತ್ರಜ್ಞಾನವನ್ನು ಬಳಸಿ ಮಾಹಿತಿ ಸಂಗ್ರಹಿಸಲು ಮುಂದಾದರು. ಈ ವೇಳೆ ಅಬ್ದುಲಗಣಿ ಅವರು ಗುಜರಾತ್ ರಾಜ್ಯದ ಆನಂದನಗರ ಭಾಗದಲ್ಲಿ ನೆಲೆಸಿರುವ ಸಾಧ್ಯತೆಯ ಬಗ್ಗೆ ಮಹತ್ವದ ಸುಳಿವು ಲಭಿಸಿತು.

ಸುಳಿವಿನ ಆಧಾರದ ಮೇಲೆ ವಿಶೇಷ ಕಾರ್ಯಾಚರಣೆ ಕೈಗೊಂಡ ಪೊಲೀಸರು, ವ್ಯಕ್ತಿಯಿರುವ ಸ್ಥಳವನ್ನು ಖಚಿತಪಡಿಸಿಕೊಂಡು ತಂಡವನ್ನು ಗುಜರಾತ್‌ಗೆ ಕಳುಹಿಸಿದರು.

**ಗುಜರಾತ್‌ಗೆ ತೆರಳಿ ಪತ್ತೆಹಚ್ಚಿದ ಪೊಲೀಸ್ ತಂಡ :** ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ. ರಾಮರಾಜನ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಆರ್.ಬಿ. ಬಸರಗಿ, ಡಿವೈಎಸ್‌ಪಿ ಪ್ರಶಾಂತ ಮುನ್ನೋಳ್ಳಿ ಹಾಗೂ ಸಿಪಿಐ ರತನಕುಮಾರ ಜೀರಗ್ಯಾಳ ಅವರ ಮಾರ್ಗದರ್ಶನದಲ್ಲಿ ಪಿಎಸ್‌ಐ ಮಾಳಪ್ಪ ಪೂಜಾರಿ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿತು. ಪೊಲೀಸ್ ಸಿಬ್ಬಂದಿ ಎಸ್.ಎ. ಬೇವನೂರ ಗುಜರಾತ್‌ಗೆ ತೆರಳಿ ಅಬ್ದುಲಗಣಿ ಅವರನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾದರು. ನಾಲ್ಕು ವರ್ಷಗಳ ಬಳಿಕ ವ್ಯಕ್ತಿ ಸುರಕ್ಷಿತವಾಗಿ ಪತ್ತೆಯಾಗಿರುವುದು ಕುಟುಂಬಸ್ಥರಲ್ಲಿ ಸಂತಸ ಮೂಡಿಸಿದೆ.

**ಪೊಲೀಸರ ಕಾರ್ಯಕ್ಕೆ ಮೆಚ್ಚುಗೆ :** ತಂತ್ರಜ್ಞಾನದ ನೆರವಿನಿಂದ ವರ್ಷಗಳ ಕಾಲ ಬಾಕಿ ಉಳಿದಿದ್ದ ನಾಪತ್ತೆ ಪ್ರಕರಣವನ್ನು ಬಗೆಹರಿಸಿರುವ ಹಾರೂಗೇರಿ ಪೊಲೀಸ್ ಠಾಣೆಯ ಕಾರ್ಯಕ್ಕೆ ಹಿರಿಯ ಅಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. Natgrid ನಂತಹ ಆಧುನಿಕ ತಂತ್ರಜ್ಞಾನಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ತನಿಖೆ ನಡೆಸಿದ ಪರಿಣಾಮ ಈ ಯಶಸ್ಸು ಸಾಧ್ಯವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಪ್ರಕರಣವು ಆಧುನಿಕ ತಂತ್ರಜ್ಞಾನ ಮತ್ತು ಪೊಲೀಸ್ ತನಿಖೆಯ ಸಮನ್ವಯದಿಂದ ವರ್ಷಗಳ ಕಾಲ ಸುಳಿವು ಸಿಗದ ಪ್ರಕರಣಗಳನ್ನೂ ಯಶಸ್ವಿಯಾಗಿ ಬಗೆಹರಿಸಬಹುದೆಂಬುದಕ್ಕೆ ಮತ್ತೊಂದು ಉದಾಹರಣೆಯಾಗಿದೆ.

# ಸೌಮ್ಯ ಸ್ವಭಾವ-ಉತ್ತಮ ಆಡಳಿತದ ಮೂಲಕ ಕಿರಿಯರಿಗೆ ಮಾರ್ಗದರ್ಶಕರಾಗಿದ್ದ ಚವ್ಹಾಣ: ಜಿ.ಪಂ ಸಿಇಒ ರಿಷಿ ಆನಂದ ಶ್ಲಾಘನೆ



**ಬೆಳಗಾವಿ ವಾರ್ತೆ ವಿಜಯಪುರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸುಮಾರು 32 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಕೆ. ಕೆ. ಚವ್ಹಾಣ ಅವರಿಗೆ ಇಲ್ಲಿನ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಹಮ್ಮೊ ಕೊಂಡಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ವಿವಿಧ ಇಲಾಖೆ ಅಧಿಕಾರಿ,ಸಿಬ್ಬಂದಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾದಿಕಾರಿಗಳು, ಸಾರ್ವಜನಿಕರು ಆತ್ಮೀಯವಾಗಿ ಸನ್ಮಾನಿಸಿ, ಶುಭ ಹಾರೈಸಿದರು.

ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು, ಸೇವಾ ನಿವೃತ್ತಿ ಹೊಂದುತ್ತಿರುವ ಕೆ. ಕೆ. ಚವ್ಹಾಣ ಅವರು ಸಂಘಟಿತ ಆಡಳಿತ ಮತ್ತು ಎಲ್ಲರನ್ನೂ ಒಳಗೊಳ್ಳುವ ಅದ್ಭುತ ಸ್ವಭಾವವನ್ನು ಹೊಂದಿದ್ದರು. ಎಂತಹ ಕೆಲಸದ ಒತ್ತಡದ ಕ್ಲಿಷ್ಟಕರ ಹಾಗೂ ಕಷ್ಟದ ಪರಿಸ್ಥಿತಿಯಲ್ಲೂ ತಮ್ಮ ಅಧೀನ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿ, ಕಾರ್ಯ ನಿರ್ವಹಣೆಯನ್ನು ಸುಗಮಗೊಳಿಸುತ್ತಿದ್ದರು. ಅತ್ಯಂತ ಸೌಮ್ಯ ಸ್ವಭಾವದೊಂದಿಗೆ ಕಾನೂನು ಪರಿಪಾಲನೆಗೆ ಆದ್ಯತೆ ನೀಡಿ, ಅವರ ಕಾರ್ಯವೈಖರಿ ನಿಜಕ್ಕೂ ಮೆಚ್ಚುವಂತದ್ದು ಎಂದು ಶ್ಲಾಘಿಸಿದರು. ಅಲ್ಲದೆ, ಅವರ ವಿಶ್ರಾಂತ ಜೀವನವು ಅತ್ಯಂತ ಸುಖಮಯ ಹಾಗೂ ಆರೋಗ್ಯಪೂರ್ಣವಾಗಿರಲಿ ಎಂದು ಹಾರೈಸಿದರು.

ಇದೇ ಸಂದರ್ಭದಲ್ಲಿ ಆತ್ಮೀಯ ಸನ್ಮಾನ ಸ್ವೀಕರಿಸಿ ಮಾತನಾಡಿದ ಕೆ. ಕೆ. ಚವ್ಹಾಣ ಅವರು, ನನ್ನ ಸುದೀರ್ಘ ವೃತ್ತಿ ಜೀವನದಲ್ಲಿ ಇಲಾಖೆಯ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಹೆಗಲಿಗೆ ಹೆಗಲು ಕೊಟ್ಟು ಸಹಕರಿಸಿದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರ ಸಹಕಾರ ಅನನ್ಯವಾದದ್ದು.ಈ ಇಲಾಖೆಯಲ್ಲಿ ಸೇವೆ ಸಲ್ಲಿಸಿದ್ದು ನನ್ನ ಬದುಕಿನಲ್ಲಿ ಅತ್ಯಂತ ಖುಷಿ ತಂದಿದೆ ಎಂದು ಭಾವನಾತ್ಮಕವಾಗಿ ತಮ್ಮ ವೃತ್ತಿ ಜೀವನದ ದಿನಗಳನ್ನು ಮೆಲುಕು ಹಾಕಿದರು.

ಜಿಲ್ಲಾ ನಿರೂಪಣಾಧಿಕಾರಿಗಳಾದ ಶ್ರೀಮತಿ ನಿರ್ಮಲಾ ಸುರಪುರ ಅವರು ಕಾರ್ಯಕ್ರಮದ ಸ್ವಾಗತ ಹಾಗೂ ಪ್ರಾಸ್ತಾವಿಕ ನುಡಿಗಳೊಂದಿಗೆ ಕೆ. ಕೆ. ಚವ್ಹಾಣ ಅವರ ಸುದೀರ್ಘ ಸೇವೆಯನ್ನು ಸ್ಮರಿಸಿ, ಕಿರು ಪರಿಚಯ ಮಾಡಿಕೊಟ್ಟರು.

ಈ ಸಮಾರಂಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ, ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳಾದ ರಾಮಣ್ಣ ಅಥಣಿ, ಮುಖ್ಯ ಯೋಜನಾ ನಿರ್ದೇಶಕರಾದ ಸಿ.ಬಿ ಕುಂಬಾರ,ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ. ದೀಪಾ ಕಾಳೆ,ಕ್ರೀಡಾಧಿಕಾರಿ ರಾಜಶೇಖರ ಧೈವಾಡಿ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ,ವಾರ್ತಾಧಿಕಾರಿ ಅಮರೇಶ ದೊಡಮನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ದೀಪಾಕ್ಷಿ ಜಾನಕಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಬಸವರಾಜ ಜಿಗಳೂರ,ಶ್ರೀಮತಿ ಗೀತಾ ಗುತ್ತರಗಿಮಠ,ಎಸ್ ಸಿ ಮ್ಯಾಗೇರಿ, ಶಿವಕುಮಾರ್ ಕುಂಬಾರ, ಸಾಹೇಬ್ ಗೌಡ, ಅನಿಲ್ ಹಳ್ಳಿ ಹಾಗೂ ಶ್ರೀಮತಿ ಶಿಲ್ಪಾ ಹಿರೇಮಠ,ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಇಲಾಖೆಯ ಅಧುಕಾರಿ, ಸಿಬ್ಬಂದಿ,ವಿವಿಧ ಸರ್ಕಾರೇತರ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ರಾಘವೇಂದ್ರ ಪಾಟೀಲ್-75 ಅಭಿನಂದನಾ ಕಾರ್ಯಕ್ರಮ




**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಸಾಹಿತಿಗಳು, ಹಿರಿಯರು, ಆತ್ಮೀಯರು, ಹಿತೈಷಿಗಳು, ನಿವೃತ್ತ ಪ್ರಾಧ್ಯಾಪಕ ರಾಘವೇಂದ್ರ ಪಾಟೀಲ ಅವರ 75ನೇ ಹುಟ್ಟು ಹಬ್ಬದ ನಿಮಿತ್ತ ಆಯೋಜಿಸಿದ್ದ ರಾಘವೇಂದ್ರ ಪಾಟೀಲ್-75 ಅಭಿನಂದನೆ ಹಾಗೂ ಪಾಟೀಲರ ವೈವಾಹಿಕ ಜೀವನ ಮತ್ತು ಬರಹದ ಬದುಕಿನ ಸುವರ್ಣ ಸಂಭ್ರಮದಲ್ಲಿ ಭಾಗವಹಿಸಿದ್ದ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಸದಸ್ಯರು ಕಥೆ, ಕಾದಂಬರಿಕಾರರು, ಜೀವ ಜಗತ್ತಿನ ಪ್ರಾಣಿಶಾಸ್ತ್ರ ಮತ್ತು ಸಾಹಿತ್ಯ ಲೋಕ ಎಂಬ ಎರಡೂ ಕ್ಷೇತ್ರಗಳಲ್ಲಿ ಕೃಷಿ ಮಾಡಿ ವಿಶಿಷ್ಠ ಸಾಧನೆಯ ಶಿಖರ ತಲುಪಿದ ಹಿರಿಯ ಸಾಹಿತಿ ರಾಘವೇಂದ್ರ ಪಾಟೀಲ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು, ಮಾಲಾರ್ಪಣೆ ಮಾಡಿ, ಗೌರವ ಪೂರ್ವಕವಾಗಿ ಹೆಮ್ಮೆ, ಅಭಿಮಾನದಿಂದ ಸನ್ಮಾನಿಸಿದರು. ಹುತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು. ಪರಮಾತ್ಮ ಅವರಿಗೆ ಉತ್ತಮ ಆರೋಗ್ಯ ಭಾಗ್ಯ ನೀಡಿ ಕರುಣಿಸಲಿ ಎಂದು ಶುಭಾಶಯ ಕೋರಿದರು.

ಹಿರಿಯರಾದ ಮಲ್ಲಿಕಾರ್ಜುನ ಆರ್ ಹಂಜಿ, ಹಿರಿಯ ಕಥೆಗಾರರಾದ ಡಾ ವೀಣಾ ಶಾಂತೇಶ್ವರ, ಕನ್ನಡ ಸಾಹಿತ್ಯ ಪರಿಷತ್ತು ಧಾರವಾಡ ಜಿಲ್ಲಾಧ್ಯಕ್ಷ ಡಾ ಲಿಂಗರಾಜ ಅಂಗಡಿ, ಗೌರವ ಕಾರ್ಯದರ್ಶಿ ಪ್ರೊ ಕೆ ಎಸ್ ಕೌಜಲಗಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಸಾಹಿತಿಗಳು, ಗಣ್ಯರಾದ ಡಾ ನರಹಳ್ಳಿ ಬಾಲಸುಬ್ರಹ್ಮಣ್ಯ, ಮಲ್ಲಿಕಾರ್ಜುನ ಹಿರೇಮಠ, ಡಾ ಬಾಳಣ್ಣ ಶೀಗಿಹಳ್ಳಿ, ಶ್ರೀನಿವಾಸ ವಾಡಪ್ಪಿ , ಡಾ ಪ್ರಜ್ಞಾ ಮತ್ತಿಹಳ್ಳಿ , ಡಾ ಶಶಿಧರ ನರೇಂದ್ರ, ಡಾ ಅನಿಲ ಮೈತ್ರಿ, ಮುಂತಾದವರು ಇದ್ದರು.

# ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** 2026ನೇ ಸಾಲಿನ ಮಾರ್ಚ, ಎಪ್ರೀಲ್‌ನಲ್ಲಿ ನಡೆದ ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಅಂತಿಮ ವರ್ಷದ ಪಿ.ಯು.ಸಿ, 12ನೇ, ಐಟಿಐ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಪಾಸಾಗಿರಬೇಕು. ಹಾಗೂ ಮೆಟ್ರಿಕ ನಂತರದ ಪದವಿ, ಸ್ನಾತಕೋತ್ತರ, ತಾಂತ್ರಿಕ ಮತ್ತು ವೈದ್ಯಕೀಯ ಕೋರ್ಸುಗಳಿಗೆ ಸೆಮಿಸ್ಟರ್ ಪದ್ಧತಿ ಇದ್ದಲ್ಲಿ ಎಲ್ಲಾ ಸೆಮಿಸ್ಟರಗಳಲ್ಲಿ ಪ್ರಥಮ ಪ್ರಯತ್ನದಲ್ಲಿಯೇ ಪಾಸಾಗಿರಬೇಕು.

ಯಾವುದೇ ಕೋರ್ಸುಗಳಲ್ಲಿ ಪ್ರತಿ ವರ್ಷದ ಪರೀಕ್ಷೆ ಅಥವಾ ಸೆಮಿಸ್ಟರ್‌ಗಳಲ್ಲಿ compartmental/carry over system gÀr ಪಾಸಾಗಿದ್ದರೆ ಅಂತಹವರು ಬಹುಮಾನದ ಹಣ ಪಡೆಯಲು ಅರ್ಹರಿರುವುದಿಲ್ಲ.

ಅರ್ಹ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆ ವೆಬ್‌ಸೈಟ್ ತಿತಿತಿ.ತಿ.ಇಚಿಡಿ.ಟುಛಿ.ಟಿ ಮೂಲಕ ಅರ್ಜಿ ಸಲ್ಲಿಸಬೇಕು. ಹಾಗೂ ಅರ್ಜಿ ಸಲ್ಲಿಸಿದ ನಂತರ ಅರ್ಜಿಯ ಪ್ರತಿಯನ್ನು ಅಗತ್ಯ ದಾಖಲಾತಿಗಳನ್ನು ದೃಢೀಕರಿಸಿ, ಅರ್ಜಿಯೊಂದಿಗೆ ಲಗತ್ತಿಸಿ ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಡಿ.ಸಿ. ಕಂಪೌಂಡ, ಧಾರವಾಡ ಇಲ್ಲಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಹಾಗೂ ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಯ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರುಗಳ ಗ್ರೇಡ್-1, 2ರವರ ಕಚೇರಿಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳದಲ್ಲಿ ಗಮನ ಸೆಳೆದ ಈಜು ಸ್ಪರ್ಧೆ



**ಬೆಳಗಾವಿ ವಾರ್ತೆ ಕೊಪ್ಪಳ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಸ್ವೀಮಿಂಗ್ ಕ್ಲಬ್ ಇವರ ಸಹಯೋಗದೊ ೦ದಿಗೆ ರವಿವಾರ ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ ಈಜು ಸ್ಪರ್ಧೆಯು ಎಲ್ಲರ ಗಮನ ಸೆಳೆಯಿತು.

ಕೊಪ್ಪಳ ಸಿಪಿಐ ಸುರೇಶ ಅವರು ಈಜು ಸ್ಪರ್ಧೆಗೆ ಚಾಲನೆ ನೀಡಿದರು. ಬಳಿಕ ಮಾತನಾಡಿ, ಇಂತಹ ಕಾರ್ಯಕ್ರಮಗಳು ಬಹಳ ಮುಖ್ಯ. ಪ್ರತಿಯೊಬ್ಬ ಕ್ರೀಡಾಪಟು ಈಜು ಸ್ಪರ್ಧೆಯಲ್ಲಿ ಭಾಗವಹಿಸಿದಾಗ ದೈಹಿಕವಾಗಿ ಮಾನಸಿಕವಾಗಿ ಸದೃಡವಾಗಲು ಸಾಧ್ಯ. ಹಾಗಾಗಿ ಕ್ರೀಡಾಪಟುಗಳು ಇಂತಹ ಕಾರ್ಯಕ್ರಮಗಳ ಸದುಪಯೋಗವನ್ನು ಪಡೆದುಕೊಳ್ಳಬೇಕು. ಕ್ರೀಡಾ ಪಟುಗಳಿಗೆ ಉತ್ತಮ ರೀತಿಯಲ್ಲಿ ಕ್ರೀಡಾ ಸೌಲಭ್ಯಗಳು ಸಿಗುತ್ತಿದ್ದು, ಪಾಲಕರು ಪೋಷಕರು ತಮ್ಮ ಮಕ್ಕಳಿಗೆ ಕ್ರೀಡೆಯಲ್ಲಿ ಭಾಗವಹಿಸಲು ಪ್ರೋತ್ಸಾಹಿಸಬೇಕೆಂದು ಹೇಳಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠಲ ಜಾಬಗೌಡರ್ ಅವರು ಮಾತನಾಡಿ, ಕ್ರೀಡೆ ಜೀವನದ ಒಂದು ಭಾಗವಾಗಿದೆ. ಪ್ರತಿಯೊಬ್ಬರು ಒಂದೊಂದು ಕ್ರೀಡೆಯಲ್ಲಿ ಭಾಗವಹಿಸಿ ತಮ್ಮ ಸಾಮರ್ಥ್ಯವನ್ನು ಹೆಚ್ಚಿಸುವದರ ಜೊತೆಗೆ ತಮ್ಮ ಆರೋಗ್ಯವನ್ನು ಸದೃಡವಾಗಿಟ್ಟುಕೊಳ್ಳಬೇಕು. ಈಜು ಸ್ಪರ್ಧೆ ಬಹಳ ಮುಖ್ಯವಾಗಿದ್ದು, ಕೊಪ್ಪಳ ಜಿಲ್ಲೆಯ ಕ್ರೀಡಾ ಪಟುಗಳಿಗೆ ಈ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ಈಜು ಸ್ಪರ್ಧೆಯಲ್ಲಿ ಅಂತರ ರಾಷ್ಟ್ರೀಯ ಕ್ರೀಡಾ ಪಟುಗಳಾದ ಅಸ್ಮಿತಾ ಚಂದ್ರು ಹಾಗೂ ವೃತ್ತಿ ಅಗರವಾಲ್ ಅವರು ಉತ್ತಮ ಸಾಧನೆಯನ್ನು ಮಾಡಿದ್ದಾರೆ. ಅಸ್ಮಿತಾ ಚಂದು ಅವರು ಸಿಂಗಾಪೂರದಲ್ಲಿ ಅಂತರಾಷ್ಟ್ರೀಯ ಈಜು ಸ್ಪರ್ಧೆಯಲ್ಲಿ ಸಾಧನೆ ಮಾಡಿರುತ್ತಾರೆ. ಅವರಂತೆ ಎಲ್ಲಾ ಕ್ರೀಡಾಪಟುಗಳು, ಈ ಈಜು ಸ್ಪರ್ಧೆಯಲ್ಲಿ ಆಸಕ್ತಿವಹಿಸಿ ರಾಷ್ಟ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವಂತೆ ಬೆಳೆಯಬೇಕು ಎಂದು ಶುಭ ಹಾರೈಸಿದರು.

ಅಂತರ ರಾಷ್ಟೀಯ ಕ್ರೀಡಾಪಟು ಅಸ್ಮಿತಾಚಂದ್ರು ಅವರು ಮಾತನಾಡಿ, ನಾನು ಹೈದಾರಾಬಾದಿನವಳು ನಾನು ಈಜು ಸ್ಪರ್ಧೆಯಲ್ಲಿ ಹೆಚ್ಚಿನ ಆಸ್ತಿಕ ಇದ್ದು, ನನಗೆ ನನ್ನ ತಂದೆ ತಾಯಿಗಳ ಪ್ರೋತ್ಸಾಹ ಹಾಗೂ ನನ್ನ ನೆಚ್ಚಿನ ಗುರುಗಳ ಮಾರ್ಗದರ್ಶನದಿಂದ ಬೆಸಿಗೆ ತರಬೇತಿಯಲ್ಲಿ ಭಾಗಹಿಸುತ್ತಿದ್ದೆ. ದಿನಂಪ್ರತಿ ಬೆಳಿಗ್ಗೆ ಈಜುತ್ತಿದ್ದೆ, ಇದರಿಂದ ನನಗೆ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಲು ಅವಕಾಶ ಸಿಕ್ಕಿದೆ. ಇದರಂತೆ ತಾವುಗಳು ಹೆಚ್ಚಿನ ರೀತಿಯಲ್ಲಿ ಈಜು ತರಬೇತಿ ಪಡೆದು ರಾಷ್ಟ ಮಟ್ಟದಲ್ಲಿ ಗುರುತಿಸಿಕೊಳ್ಳಿ ಎಂದು ತಿಳಿಸಿದರು. ಅಂತರ ರಾಷ್ಟೀಯ ಕ್ರೀಡಾಪಟು ವೃತಿ ಅಗರವಾಲ್ ಅವರು ಮಾತನಾಡಿ, ಈಜು ಸ್ಪರ್ಧೆಯಲ್ಲಿ ನಾನು ಸಹ ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳೆದಿರುತ್ತೇನೆ. ತಾವುಗಳು ಸಹಿತ ಹಿರಿಯರ ಹಾಗೂ ಗುರುಗಳ ಮಾರ್ಗದರ್ಶನದಲ್ಲಿ ರಾಷ್ಟ ಮಟ್ಟದಲ್ಲಿ ಬೆಳೆಯಲು ಹಾರೈಸಿದರು.

**50 ಕ್ರೀಡಾಪಟುಗಳು ಭಾಗಿ:** ಈಜು ಸ್ಪರ್ಧೆಯಲ್ಲಿ 8 ರಿಂದ 10 ವರ್ಷ ವಯೋಮಿತಿ, 10 ರಿಂದ 12 ವರ್ಷ ವಯೋಮಿತಿ ಹಾಗೂ 12 ರಿಂದ 14 ವರ್ಷ ವಯೋಮಿತಿ ಒಳಗಿನ ಬಾಲಕ ಮತ್ತು ಬಾಲಕೀಯರಿಗೆ ಅವಕಾಶ ಕಲ್ಪಿಸಲಾಗಿದ್ದು, ಈಜು ಸ್ಪರ್ಧೆಯಲ್ಲಿ ಒಟ್ಟು 50 ಜನ ಬಾಲಕ ಬಾಲಕೀಯರು ಭಾಗವಹಿಸಿದ್ದರು.

**ವಿಜೇತರು:** 8 ರಿಂದ 10 ವರ್ಷ ವಯೋಮಿತಿಯ ಸ್ಪರ್ಧೆಯಲ್ಲಿ ವಿರಾಟ್ ಪಾಟೀಲ್ ಪ್ರಥಮ ಸ್ಥಾನ, ಆದರ್ಶ ದ್ವಿತೀಯ, ಸುಫಿಯಾನ್ ಪಟೇಲ್ ತೃತೀಯ ಸ್ಥಾನ ಪಡೆದುಕೊಂಡರು. 10 ರಿಂದ 12 ವರ್ಷ ವಯೋಮಿತಿಯ ಸ್ಪರ್ಧೆಯಲ್ಲಿ ಶೌರ್ಯ ಪಾಟೀಲ್ ಪ್ರಥಮ, ಅನುಷ್ ದ್ವಿತೀಯ, ಶ್ರೀಧರ್ ಭಟ್ ತೃತೀಯ ಸ್ಥಾನ ಪಡೆದುಕೊಂಡರೆ, 12 ರಿಂದ 14 ವರ್ಷ ವಯೋಮಿತಿಯ ಸ್ಪರ್ಧೆಯಲ್ಲಿ ಗವಿಶ್ ಪ್ರಥಮ, ಶ್ರೇಯಸ್ ದ್ವಿತೀಯ ಮತ್ತು ತನಯ್ ತೃತೀಯ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಕಾರ್ಯಕ್ರಮದಲ್ಲಿ ತರಬೇತುದಾರರಾದ ಜಾನ್ವಿ ಮತ್ತು ಎ.ಎನ್. ಯತಿರಾಜ್, ಕೊಪ್ಪಳ ತಾಲ್ಲೂಕ ಕ್ರೀಡಾಧಿಕಾರಿಗಳಾದ ಶರಣಬಸವ ಬಂಡಿಹಾಳ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಬಸವಾಜು ಹನಮಸಾಗರ ಅವರು ಕಾರ್ಯಕ್ರಮ ನಿರೂಪಿಸಿದರು.

# ಮುಂಗಾರು ಹಂಗಾಮಿನ ಬಿತ್ತನೆ ಬೀಜಗಳ ವಿತರಣೆ: ರೈತರು ಸದುಪಯೋಗ ಪಡೆದುಕೊಳ್ಳಿ

**ಬೆಳಗಾವಿ ವಾರ್ತೆ ಕೊಪ್ಪಳ:** 2026-27 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರೈತ ಸಂಪರ್ಕ ಕೇಂದ್ರಗಳ ಮೂಲಕ ಸಹಾಯಧನದಡಿಯಲ್ಲಿ ಬಿತ್ತನೆ ಬೀಜಗಳ ಪೂರೈಕೆಯಡಿಯಲ್ಲಿ ಬಿತ್ತನೆ ಬೀಜಗಳ ವಿತರಣೆ ಪ್ರಾರಂಭವಾಗಿದ್ದು, ರೈತರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ರಸಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ತರಲು ನೈಜ ರೈತರಿಗೆ ಮಾತ್ರ ಸಬ್ಸಿಡಿ ಸಹಿತ ರಸಗೊಬ್ಬರ ತಲುಪಿಸಲು ರೈತರ ಎಫ್.ಐ.ಡಿ ಕಡ್ಡಾಯವಾಗಿರುತ್ತದೆ. ಕೃಷಿ ಇಲಾಖೆ ಅಭಿವೃದ್ಧಿ ಪಡಿಸಿರುವ ಕೆ-ಕಿಸಾನ್ ಹೊಸ ತಂತ್ರಾಂಶದ ಮೂಲಕವೇ ಇನ್ನು ಮುಂದೆ ರಸಗೊಬ್ಬರ ವಿತರಣೆ ನಡೆಯಲಿದ್ದು, ರೈತರು ತಮ್ಮ ಎಫ್.ಐ.ಡಿ ಒಂದು ಸಂಖ್ಯೆ ಮತ್ತು ಆಧಾರ ಕಾರ್ಡ ಬಳಸಿ ತಮ್ಮ ಜಮೀನಿನ ವಿಸ್ತೀರ್ಣ ಹಾಗೂ ಬೆಳೆದ ಬೆಳೆಗಳಿಗೆ ಅನುಗುಣವಾಗಿ ಎಕರೆಗೆ ಒಂದು ಚೀಲ ಯೂರಿಯಾ ಮಾತ್ರ ಖರೀದಿಸಲು ಅವಕಾಶ ಇರುತ್ತದೆ. ಮಾರಾಟಗಾರರು ಸಹ ಇದೇ ಮಾದರಿಯಲ್ಲಿ ವಿತರಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ. ಒಂದು ವೇಳೆ ಎಫ್.ಐ.ಡಿ. ಯನ್ನು ಹೊಂದಿರದೆ ಇದ್ದಲ್ಲಿ ತಮ್ಮ ಎಲ್ಲಾ ಪಹಣಿಯನ್ನು ಹಾಗೂ ಆಧಾರ ಕಾರ್ಡನ್ನು ತೆಗೆದುಕೊಂಡು ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ, ಸಾಮಾನ್ಯ ಸೇವಾ ಕೇಂದ್ರಗಳು ಮತ್ತು ಗ್ರಾಮ್ ಒನ್ ಕೇಂದ್ರಗಳಿಗೆ ಭೇಟಿ ನೀಡಿ ಹೊಸದಾಗಿ ಎಫ್.ಐ.ಡಿ ಯನ್ನು ಮಾಡಿಕೊಳ್ಳಲು ರೈತ ಬಾಂಧವರಲ್ಲಿ ವಿನಂತಿಸಲಾಗಿದೆ.

ಎಫ್.ಐ.ಡಿ. ಯನ್ನು ಹೊಂದಿರದ ರೈತರು ಆಧಾರ ಕಾರ್ಡ, ಪಹಣಿ, ಬ್ಯಾಂಕ್ ಪಾಸ್ ಬುಕ್, ಜಾತಿ ಪ್ರಮಾಣ ಪತ್ರ (ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಟ ಪಂಗಡ ಇದ್ದಲ್ಲಿ), ಪಾಸ್ ಪೋರ್ಟ್ ಸೈಜ್ ಪೋಟೊ, ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆಯೊಂದಿಗೆ ಅಧಿಕೃತ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಮಾರಾಟ ಮಳಿಗೆಗಳಿಂದ ಮಾತ್ರ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಮತ್ತು ಇತರೆ ಕೃಷಿ ಪರಿಕರಗಳನ್ನು ಖರೀದಿಸಬೇಕು ಹಾಗೂ ಕಡ್ಡಾಯವಾಗಿ ಬಿಲ್ಲುಗಳನ್ನು ಪಡೆದುಕೊಳ್ಳಬೇಕು. ಡಿ.ಎ.ಪಿ ರಸಗೊಬ್ಬರ ಪರ್ಯಾಯವಾಗಿ ನ್ಯಾನೋ ಡಿ.ಎ.ಪಿ ಮತ್ತು ಯೂರಿಯ ರಸಗೊಬ್ಬರ ಪರ್ಯಾಯವಾಗಿ ನ್ಯಾನೋ ಯುರಿಯಾ ರಸಗೊಬ್ಬರವನ್ನು ಬಳಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ: ಜಾಗೃತಿ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಕೊಪ್ಪಳ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಭೋದಕ ಆಸ್ಪತ್ರೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಹಾಗೂ ಸರಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜ್ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಮೇ 29ರಂದು ಕಾಲೇಜಿನ ಸಭಾ ಭವನದಲ್ಲಿ "ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ" ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ಪ್ಹಿ.ಪಿ. ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಮೇ 28 ರಂದು "ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ" ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. "ಎಲ್ಲರೂ ಒಟ್ಟಾಗಿ, ಮುಟ್ಟಿನ ಸ್ನೇಹಿಯಾದ ಜಗತ್ತನ್ನು ನಿರ್ಮಿಸೋಣ" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ವಿಜ್ಞಾನ ತಂತ್ರಜ್ಞಾನ ವಿಷಯದಲ್ಲಿ ಜಗತ್ತು ಅಭಿವೃದ್ಧಿ ಕಂಡರೂ ಮಹಿಳೆಯರ ನೈಸರ್ಗಿಕವಾದ ಋತುಚಕ್ರದ ಕಾಳಜಿ ಶುಚಿತ್ವದ ಬಗ್ಗೆ ಅರಿವಿನ ಕೊರತೆ ಹೊಂದಿದೆ ಎಂದರು.

ತಂತ್ರಜ್ಞಾನದಲ್ಲಿ ದಾಪೂಗಾಲು ಇಡುತ್ತಿರುವ ನಾವು ಇಂದಿಗೂ ಮಹಿಳೆಯರ ಋತುಚಕ್ರದ ಕಟ್ಟುಪಾಡಿಗೆ ಒಳಗಾಗಿದ್ದೇವೆ. ಈ ಬಗ್ಗೆ ಇಂದಿಗೂ ಇದನ್ನು ದೇಹದ ನೈಸರ್ಗಿಕ ಚಟುವಟಿಕೆ ಎಂಬುದನ್ನು ಮರೆತು ಕಳಂಕ ಎಂಬ ರೀತಿಯಲ್ಲಿ ಕಾಣುತ್ತಿದ್ದೇವೆ.



ರಾಷ್ಟಗಳು ಸಾಂಪ್ರಾದಾಯಿಕ ಮನಸ್ಥಿತಿ ಹೊಂದಿರುವ ಪುರುಷ ಮತ್ತು ಮಹಿಳೆಯರಿಗೆ ಈ ವಿಚಾರ ಕುರಿತು ಸಾರ್ವಜನಿಕವಾಗಿ ಮಾತನಾಡುವುದು ದೊಡ್ಡ ಕಷ್ಟವಾಗಿದೆ. ಜನರಿಗೆ ಈ ಋತುಚಕ್ರದ ವಿಚಾರ ಕುರಿತು ಸರಿಯಾದ ಮಾಹಿತಿ ಮತ್ತು ಅರಿವು ಮೂಡಿಸುವ ಪ್ರಯತ್ನವಾಗಬೇಕಾಗಿದೆ. ವಿಶ್ವ ಋತುಚಕ್ರದ ನೈರ್ಮಲ್ಯದ ದಿನದ ಮೂಲಕ ಮಹಿಳೆಯರು ಮತ್ತು ಯುವತಿಯರಿಗೆ ಋತುಚಕ್ರದ ನೈರ್ಮಲ್ಯ ಮತ್ತು ಸುರಕ್ಷತೆ ಬಗ್ಗೆ ತಿಳಿ ಹೇಳುವ ಪ್ರಯತ್ನ ನಡೆಸಲಾಗುವುದು. ಈ ವಿಶ್ವ ಋತುಚಕ್ರ ನೈರ್ಮಲ್ಯ ದಿನವನ್ನು 2030ರ ವೇಳೆಗೆ ಋತುಚಕ್ರವು ಜೀವನದ ಸಾಮಾನ್ಯ ಸಂಗತಿಯನ್ನಾಗಿ ಮಾಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು ಮತ್ತು ಪೌಷ್ಠಿಕ ಆಹಾರದಲ್ಲಿ ಹದಿ-ಹರೆಯದವರು ಪೌಷ್ಠಿಕ ಆಹಾರ ಸೇವನೆ ಕುರಿತು ವಿವರವಾಗಿ ಮಾತನಾಡಿದರು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ದೇವಮ್ಮ ಅವರು ಮಾತನಾಡಿ, ಋತುಚಕ್ರದ ಮಹತ್ವದ ಪಂಚಸೂತ್ರಗಳು, ತ್ಯಾಜ್ಯ ವಿಲೇವಾರಿ ಹಾಗೂ ಪ್ರಮುಖ ಅಂಶಗಳ ಕುರಿತು ವಿವರವಾಗಿ ಮಾತನಾಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಕೆ.ಗಂಗಮ್ಮ ಅವರು ಸ್ಯಾನಿಟರಿ ಪ್ಯಾಡ ಬಳಕೆ, ಪೌಷ್ಠಿಕ ಆಹಾರ, ಮುಟ್ಟಿನ ಮೈತ್ರಿ ಕಪ್ ಬಳಸುವ ಬಗ್ಗೆ, ವೈಯಕ್ತಿಕ ಸ್ವಚ್ಛತೆ ಹಾಗೂ ಮುಟ್ಟಿನ ಬಗ್ಗೆ ಇರುವ ಮೂಡನಂಬಿಕೆಗಳನ್ನು ಹೋಗಲಾಡಿಸುವ ಕುರಿತು, ಹೆಚ್.ಪಿ.ಸಿ ಲಸಿಕೆ, ಹಾವು ಕಡಿತ ನಿಯಂತ್ರಣ ಕಾರ್ಯಕ್ರಮ ಮತ್ತು ರಾಷ್ಟ್ರೀಯ ರೇಬೀಸ್ ನಿಯಂತ್ರಣ ಕಾರ್ಯಕ್ರಮ ಕುರಿತು ವಿವರವಾಗಿ ಮಾತನಾಡಿದರು.

ಆರ್.ಕೆ.ಎಸ್.ಕೆ ಜಿಲ್ಲಾ ಸಂಯೋಜಕರಾದ ಮೆಹಬೂಬಸಾಬ ಇಲಾಹಿ ಅವರು ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಭೋದಕ ಆಸ್ಪತ್ರೆಯ ಆರ್.ಕೆ.ಎಸ್.ಕೆ ಆಪ್ತ ಸಮಾಲೋಚಕರಾದ ಸ್ವರೂಪರಾಣಿ ಅವರು ವಂದನಾರ್ಪಣೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರು, ಉಪನ್ಯಾಸಕರು ಹಾಗೂ ಇತರೆ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಭಾಗವಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ವಿಜಯೋತ್ಸವ ಆಚರಣೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಕರ್ನಾಟಕ ರಾಜ್ಯದ ನೂತನ ನಿಯೋಜಿತ ಮುಖ್ಯಮಂತ್ರಿಯಾಗಿ ಡಿ ಕೆ ಶಿವಕುಮಾರ ಆಯ್ಕೆಯಾಗಿರುವುದಕ್ಕೆ ಅವರ ಅಭಿಮಾನಿಗಳೂ ಹಾಗೂ ಪಕ್ಷದ ಹಿರಿಯ ಮುಖಂಡ ಸತೀಶ ಮೇಹರವಾಡೆ ರವರ ನೇತೃತ್ವದಲ್ಲಿ ನಗರದ ಕೇಶ್ವಾಪೂರ ಸರ್ವೋದಯ ಸರ್ಕಲ್‌ನಲ್ಲಿ ನೂರಾರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಪ್ರಫುಲ್ ಚಂದ್ರ ರಾಯನಗೌಡರ, ಕಾಂಗ್ರೆಸ್ ಗ್ರಾಮೀಣ ಜಿಲ್ಲಾಧ್ಯಕ್ಷ ಅನಿಲ್ ಕುಮಾರ ಪಾಟೀಲ, ಪಾಲಿಕೆ ಸದಸ್ಯರಾದ ಪ್ರಕಾಶ ಕುರಹಟ್ಟಿ, ಸುವರ್ಣ ಕಲ್ಲಕುಂಟ್ಲಾ, ಮಹೇಂದ್ರ ಸಿಂಘಿ, ಅನ್ವರ ಮುಧೋಳ, ರಾಜಶೇಖರ ಮೆಣಸಿನಕಾಯಿ, ಹೂವಪ್ಪ ದಾಯಗೋಡಿ , ಗಿರೀಶ ಮಲೆನಾಡು, ಬಂಗಾರೇಶ ಹಿರೇಮಠ, ಮಹೇಶ ದಾಬಡೆ,ವಿಶ್ವನಾಥ ಮೇಹರವಾಡೆ, ಈಶ್ವರ ಶಿರಸಂಗಿ, ಅನಿಲ್ ಕುರಹಟ್ಟಿ, ತಾರಾದೇವಿ ವಾಲಿ, ದೊಡ್ಡರಾಮಪ್ಪ ದೊಡ್ಡಮನಿ, ಬಸವರಾಜ ಬೆಣಕಲ್ಲ, ಪ್ರೇಮನಾಥ ಚಿಕ್ಕತುಂಬಳ, ಪೀರಾಜಿ ಖಂಡೇಕಾರ, ಯಲ್ಲಪ್ಪ ಮೇಹರವಾಡೆ,ಮಹಾದೇವ ಹುಡೇದ, ತಾರಾದೇವಿ ವಾಲಿ ಗೀತಾ ಪಾಟೀಲ, ಗಿರಿಜಾ ಹೂಗಾರ,ಕಲಾವತಿ ದತ್ತವಾಡ, ಮಹೇಶ ಕಾರವಾರಕರ ಮತ್ತು ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು. ಹಿರಿಯ ಕಾಂಗ್ರೆಸ್ ಮುಖಂಡ ಗಂಗಾಧರ ದೊಡ್ಡವಾಡ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು ಶಾರೂಖ ಮುಲ್ಲಾ ವಂದಿಸಿದರು.

# ಕಾರಲ್ಲಿ ಗರ್ಭಿಣಿ ಇದ್ದಾಳೆ, ಸರ್ಕಾರಕ್ಕೆ ನಾವೇನೂ ಅಲ್ವ.. ನಮ್ಮ ಪ್ರಾಣಕ್ಕಿಂತ ಝೀರೋ ಟ್ರಾಫಿಕ್ ಮುಖ್ಯಾನಾ? ರಸ್ತೆ ಮಧ್ಯೆ ಪತಿ ಪ್ರತಿಭಟನೆ

**ಬೆಳಗಾವಿ ವಾರ್ತೆ ಬೆಂಗಳೂರು:** ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ತೆರಳುತ್ತಿದ್ದ ವೇಳೆ ಝೀರೋ ಟ್ರಾಫಿಕ್ ಅಳವಡಿಕೆ ವಿರೋಧಿಸಿ ರಸ್ತೆ ಮಧ್ಯೆ ಗರ್ಭಿಣಿ ಮಹಿಳೆಯ ಪತಿ ಪ್ರತಿಭಟನೆ ನಡೆಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ನಗರದ ಹಳೆಯ ವಿಮಾನ ನಿಲ್ದಾಣ ರಸ್ತೆಯಲ್ಲಿ ನಿನ್ನೆ ರಾಜ್ಯಪಾಲರ ಸಂಚಾರದ ಹಿನ್ನೆಲೆಯಲ್ಲಿ ಸುಮಾರು 30 ನಿಮಿಷಗಳ ಕಾಲ ಸಂಚಾರವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು. ಇದರಿಂದಾಗಿ ವ್ಯಾಪಕ ಟ್ರಾಫಿಕ್ ಜಾಮ್ ಸೃಷ್ಟಿಯಾಗಿದ್ದು, ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಂಡರ್‌ಪಾಸ್ ಕಾಮಗಾರಿಯಿಂದಾಗಿ ಮೊದಲೇ ಕಿರಿದಾಗಿದ್ದ ರಸ್ತೆಯಲ್ಲಿ ಯಾವುದೇ ಪರ್ಯಾಯ ವ್ಯವಸ್ಥೆ ಮಾಡದೆ ಏಕಾಏಕಿ ರಸ್ತೆ ನಿರ್ಬಂಧಿಸಿದ್ದರಿಂದ ಸಂಚಾರ ವ್ಯವಸ್ಥೆ ಸಂಪೂರ್ಣ ಸ್ಥಗಿತವಾಗಿತ್ತು.

ಈ ಸಂಚಾರ ದಟ್ಟಣೆಯ ನಡುವೆ ತನ್ನ ಗರ್ಭಿಣಿ ಪತ್ನಿಯನ್ನು ತುರ್ತಾಗಿ ಕರೆದೊಯ್ಯುತ್ತಿದ್ದ ವ್ಯಕ್ತಿಯೊಬ್ಬರು ಸಿಲುಕಿಕೊಂಡಿದ್ದು, ಗರ್ಭಿಣಿ ಪತ್ನಿಯನ್ನು ಆಸ್ಪತ್ರೆಗೆ ತಲುಪಿಸಲಾಗದೆ ಆ ವ್ಯಕ್ತಿ ನಡುರಸ್ತೆಯಲ್ಲೇ ಕುಳಿತು ಪ್ರತಿಭಟನೆ ನಡೆಸಿದ್ದಾರೆ.

**ಕಾರಲ್ಲಿ ಗರ್ಭಿಣಿ ಇದ್ದಾಳೆ, ಸರ್ಕಾರಕ್ಕೆ ನಾವೇನೂ ಅಲ್ವ**

ಈ ಪರಿಸ್ಥಿತಿಯಿಂದ ತೀವ್ರ ಆತಂಕಗೊಂಡ ಮಹಿಳೆಯ ಪತಿ, ಅಧಿಕಾರಿಗಳ ಕ್ರಮದ ವಿರುದ್ಧ ರಸ್ತೆಯಲ್ಲೇ ಕುಳಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ತಮ್ಮ ಪತ್ನಿಯ ಆರೋಗ್ಯದ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ವಿಐಪಿ ಸಂಚಾರಕ್ಕಾಗಿ ಸಾಮಾನ್ಯ ನಾಗರಿಕರ ತುರ್ತು ಅಗತ್ಯಗಳನ್ನು ಕಡೆಗಣಿಸುವುದು ಸರಿಯಲ್ಲ. ಕಾರಲ್ಲಿ ಗರ್ಭಿಣಿ ಇದ್ದಾಳೆ.

ಸರ್ಕಾರಕ್ಕೆ ನಾವೇನೂ ಅಲ್ವಾ.. ? ನಮ್ಮ ಪ್ರಾಣಕ್ಕಿಂತ ಝೀರೋ ಟ್ರಾಫಿಕ್ ಮುಖ್ಯಾನಾ? ಎಂದು ಪ್ರಶ್ನಿಸಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ವೇಳೆ ಅವರು ರಸ್ತೆ ಮಧ್ಯದಲ್ಲೇ ನಿಂತು ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿದ್ದು, ಸ್ಥಳದಲ್ಲಿದ್ದ ಕೆಲವರು ಅವರ ಆಕ್ರೋಶಕ್ಕೆ ಬೆಂಬಲ ಸೂಚಿಸಿದರು. ಘಟನೆಯ ಇದೀಗ



ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ವಿಐಪಿ ಸಂಚಾರದ ಸಂದರ್ಭದಲ್ಲಿ ಸಾಮಾನ್ಯ ಜನರು ಎದುರಿಸುವ ತೊಂದರೆಗಳ ಬಗ್ಗೆ ಮತ್ತೆ ಚರ್ಚೆಗೆ ಕಾರಣವಾಗಿದೆ.

**ವ್ಯಾಪಕ ಪ್ರತಿಕ್ರಿಯೆ**

ಸಾಮಾಜಿಕ ಜಾಲತಾಣ ಬಳಕೆದಾರರು ಈ ಘಟನೆಯ ಕುರಿತು ಮಿಶ್ರ ಪ್ರತಿಕ್ರಿಯೆ ವ್ಯಕ್ತಪಡಿಸಿದ್ದಾರೆ. ಕೆಲವರು ವ್ಯಕ್ತಿಯ ನೋವನ್ನು ಅರ್ಥಮಾಡಿಕೊಂಡು ಬೆಂಬಲ ವ್ಯಕ್ತಪಡಿಸಿದರೆ, ಇನ್ನೂ ಕೆಲವರು ಭದ್ರತಾ ಕಾರಣಗಳಿಂದ ಇಂತಹ ಸಂಚಾರ ನಿಯಂತ್ರಣ ಅನಿವಾರ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

ಜೊತೆಗೆ ಅಂಡರ್‌ಪಾಸ್ ನಿರ್ಮಾಣ ಹಂತದಲ್ಲಿರುವ ಇಂತಹ ಸೂಕ್ಷ್ಮ ರಸ್ತೆಗಳಲ್ಲಿ ಗಣ್ಯರ ಸಂಚಾರಕ್ಕೆ ಗಂಟೆಗಟ್ಟಲೆ ಸಾರ್ವಜನಿಕರನ್ನು ತಡೆಯುವುದು ಎಷ್ಟು ಸರಿ ಎಂದು ಸೋಷಿಯಲ್ ಮೀಡಿಯಾಗಳಲ್ಲಿ ನೆಟ್ಟಿಗರು ಬೆಂಗಳೂರು ಟ್ರಾಫಿಕ್ ಪೊಲೀಸ್ ವಿರುದ್ಧ ಆಕ್ರೋಶ ಹೊರಹಾಕುತ್ತಿದ್ದಾರೆ.

# ಬೆಂಗಳೂರಿನಲ್ಲಿ ಭಾರೀ ಮಳೆ ಸಾಧ್ಯತೆ: ಜೂನ್ 5 ರವರೆಗೆ 'ಯೆಲ್ಲೋ' ಅಲರ್ಟ್ ಘೋಷಣೆ!



**ಬೆಳಗಾವಿ ವಾರ್ತೆ ಬೆಂಗಳೂರು:** ಬೆಂಗಳೂರು ಮತ್ತು ರಾಜ್ಯದ ದಕ್ಷಿಣ ಒಳನಾಡಿನ ಇತರ ಭಾಗಗಳಲ್ಲಿ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ.

ಜೂನ್ 5 ರವರೆಗೆ ನಗರದಲ್ಲಿ ಯೆಲ್ಲೋ ಆಲರ್ಟ್ ಘೋಷಿಸಲಾಗಿದೆ. ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಕೆಲವು ದಿನಗಳವರೆಗೆ ಹಗುರದಿಂದ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.

ಸೋಮವಾರ, ನಗರದಲ್ಲಿ ಮೋಡ ಕವಿದ ವಾತಾವರಣವಿದ್ದು, ಕೆಲವು ಪ್ರದೇಶಗಳಲ್ಲಿ ಗಂಟೆಗೆ 40–50 ಕಿ.ಮೀ ವೇಗದಲ್ಲಿ ಮಳೆಯಾಗುವ ಸಾಧ್ಯತೆ ಇದೆ. 33ಲಿಅ ಗರಿಷ್ಠ ಮತ್ತು 21ಲಿಅ ಕನಿಷ್ಠ ತಾಪಮಾನ ದಾಖಲಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ವಿದರ್ಭ, ಬಂಗಾಳಕೊಲ್ಲಿ ಮತ್ತು ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತದಿಂದಾಗಿ ಈ ಪರಿಸ್ಥಿತಿ ಉಂಟಾಗಿದೆ. ಮುಂದಿನ ಮೂರು ಅಥವಾ ನಾಲ್ಕು ದಿನಗಳಲ್ಲಿ ಅರೇಬಿಯನ್ ಸಮುದ್ರ, ಕೇರಳ, ತಮಿಳುನಾಡು ಮತ್ತು ಬಂಗಾಳಕೊಲ್ಲಿಯ ಕೆಲವು ಭಾಗಗಳಲ್ಲಿ ನೈಋತ್ಯ ಮುಂಗಾರು ಮತ್ತಷ್ಟು ಮುನ್ನಡೆಯಲು ಅನುಕೂಲಕರ ಪರಿಸ್ಥಿತಿಗಳನ್ನು ಸೃಷ್ಟಿಸುತ್ತಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಜೂನ್ 1 ರಂದು ರಾಜ್ಯದ ದಕ್ಷಿಣ ಒಳನಾಡಿನ ಕರ್ನಾಟಕದ ಕೆಲವು ಸ್ಥಳಗಳಲ್ಲಿ ಭಾರೀ ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಜೂನ್ 2 ರಿಂದ 6 ರವರೆಗೆ ಬೆಂಗಳೂರು ಮತ್ತು ನೆರೆಯ ಜಿಲ್ಲೆಗಳಾದ ರಾಮನಗರ, ಕೋಲಾರ ಮತ್ತು ಚಿಕ್ಕಬಳ್ಳಾಪುರದಲ್ಲಿ ಇದೇ ರೀತಿಯ ಹವಾಮಾನ ಮುಂದುವರಿಯುವ ಸಾಧ್ಯತೆಯಿದೆ.

ಜೂನ್ 1 ರಂದು ಮೈಸೂರು, ಕೊಡಗು, ಹಾಸನ, ಚಿಕ್ಕಮಗಳೂರು, ಚಾಮರಾಜನಗರ, ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಜೂನ್ 3 ರಿಂದ 6 ರವರೆಗೆ ಕರಾವಳಿ ಕರ್ನಾಟಕದಾದ್ಯಂತ ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ಗುಡುಗು ಸಹಿತ ಭಾರಿ ಮಳೆ ಮತ್ತು ಬಿರುಗಾಳಿ ಸಮಯದಲ್ಲಿ ನಿವಾಸಿಗಳು ಜಾಗರೂಕರಾಗಿರಲು ಮತ್ತು ಅದಕ್ಕೆ ಅನುಗುಣವಾಗಿ ಪ್ರಯಾಣವನ್ನು ಯೋಜಿಸಲು ಭಾರತೀಯ ಹವಾಮಾನ ಇಲಾಖೆ ಸೂಚಿಸಿದೆ.

# ಬೆಟಗೇರಿ ಹನುಮನಿಗೆ ಗುತ್ತೆ ಪೂಜೆ.!



**ಬೆಳಗಾವಿ ವಾರ್ತೆ ಬೆಟಗೇರಿ:** ಗೋಕಾಕ ತಾಲೂಕಿನ ಬೆಟಗೇರಿ ಜಾಗೃತ ಹನುಮಂತ ದೇವರಿಗೆ ಅಧಿಕ ಮಾಸದ ಪ್ರಯುಕ್ತ ಶನಿವಾರ ಮೇ.30 ರಂದು ಬೆಳಗ್ಗೆ 6 ಗಂಟೆಗೆ ಗುತ್ತೆ ಪೂಜಾ ಕಾರ್ಯಕ್ರಮ ನಡೆಯಿತು.

# ತಾಳಿಕೋಟೆಯಲ್ಲಿ ಸಂಗೀತದ ರಸ ಋಷಿಗಳು ಆಗಿ ಹೋಗಿದ್ದಾರೆ: ಸಾಲಿಮಠ

**ಬೆಳಗಾವಿ ವಾರ್ತೆ ತಾಳಿಕೋಟೆ:** 1944 ರಲ್ಲಿ ಪಂಚಾಕ್ಷರಿ ಗವಾಯಿಗಳು ಚಕ್ಕಡಿಯಲ್ಲಿಯೇ ಸಂಚಾರಿ ಸಂಗೀತ ಸೇವಾ ಕಾರ್ಯಕ್ರಮವನ್ನು ನಡೆಸುತ್ತಾ ಚಕ್ಕಡಿಯಲ್ಲಿ ತಂಬೂರಿ, ತಬಲಾ ಸಂಗೀತ ನಾದಕ್ಕೆ ತಕ್ಕಂತಿರುವ ಈ ಎಲ್ಲ ಸಲಕರಣೆಗಳನ್ನಿಟ್ಟುಕೊಂಡು ಗ್ರಾಮಾಂತರ ಪ್ರದೇಶದಲ್ಲಿ ಸಂಚರಿಸುತ್ತಾ ಸಾಗಿದ ಸಂಗೀತ ಪ್ರೇಮಿಗಳು ಸಂಗೀತ ನಾದವನ್ನು ಕೇಳಿ ದೌಡಾಯಿಸಿ ಆ ಕಾರ್ಯಕ್ರಮವನ್ನು ವೀಕ್ಷಿಸಲು ಈ ಹಿಂದೆ ಆಗಮಿಸುವ ಕಾರ್ಯವೂ ಸಹ ನಡೆಯುತ್ತಿತ್ತೆಂದು ಖ್ಯಾತ ಗವಾಯಿಗಳಾದ ಬಿ.ಎಸ್. ಸಾಲಿಮಠ ಅವರ ಪುತ್ರ ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಕಾಶೀನಾಥ ಪಿ ಸಾಲಿಮಠ ಅವರು ನುಡಿದರು.

ರವಿವಾರರಂದು ಎ.ಎಸ್. ವಠಾರ ಸಾಂಸ್ಕೃತಿಕ ಕಲಾ ಸಂಘದ ವತಿಯಿಂದ ಬಸವ ಸಮಿತಿಯ ಪ್ರಣಾಂಗಳದಲ್ಲಿ ಏರ್ಪಡಿಸಲಾದ ಪಿ.ಎ. ಸಾಲಿಮಠ ಗವಾಯಿಗಳ 22 ನೇಯ ಹಾಗೂ ಶ್ರೀ ಎ.ಎಸ್. ವಠಾರ ಗುರುಗಳ 8 ನೇ ಸ್ಮರಣೋತ್ಸವ ಅಂಗವಾಗಿ ಏರ್ಪಡಿಸಲಾದ ಸಂಗೀತ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಸನ್ಮಾನ ಸ್ವೀಕರಿಸಿ ಮಾತನಾಡುತ್ತಿದ್ದ ಅವರು ಬಿ.ಎಸ್. ಸಾಲಿಮಠ ಗುರುಗಳು ಪಂಚಾಕ್ಷರಿ ಗವಾಯಿಗಳೊಂದಿಗೆ ಅವರೂ ಕೂಡಾ ಸಂಗೀತದ ಸಂಚಾರಿ ಚಕ್ಕಡಿಯಲ್ಲಿ ಕುಳಿತು ಸಂಗೀತ ಸೇವೆ ನೀಡಿದವರಾಗಿದ್ದಾರೆ. ಬಿ.ಎಸ್. ಸಾಲಿಮಠ ನಮ್ಮ ತಂದೆಯವರಾಗಿದ್ದು ಎ.ಎಸ್. ವಠಾರ ಸರ್ ಅವರು ಸಹ ನಮ್ಮ ತಂದೆಯ ಶಿಷ್ಯರಾಗಿ ಸಂಗೀತ ಕ್ಷೇತ್ರದಲ್ಲಿ ಪರಿಣಿತರಾಗಿ ಸಂಗೀತದ ರಸ ಋಷಿಗಳಾಗಿ ಹೆಸರು ಗಳಿಸಿದ್ದಾರೆಂದರು. ತಾಳಿಕೋಟೆಯಲ್ಲಿ ಎಸ್.ಕೆ. ಹೈಸ್ಕೂಲ್‌ನ್ನು ಪ್ರಾರಂಭಿಸಿ ಶ್ರೀ ಖಾಸ್ಗತೇಶ್ವರ ಮಠದ ಶಿವಬಸವದೇವರು ನಮ್ಮ ತಂದೆ ಸಾಲಿಮಠ ಅವರು ವಿರೇಶ್ವರ




ಪುಣ್ಯಾಶ್ರಮದಲ್ಲಿ ಇದ್ದುದ್ದನ್ನು ಲಕ್ಷಿಸಿ ಅವರನ್ನು ತಾಳಿಕೋಟೆಗೆ ಕರೆತಂದು ಸಂಗೀತ ಶಿಕ್ಷಕರಾಗಿ ನೇಮಕ ಮಾಡಿಕೊಂಡರು ಅಂದು ಸರ್ಕಾರದ ಯಾವ ಸೌಲತ್ತು ಇಲ್ಲದಿದ್ದರೂ 1954 ನೇ ಸಾಲಿನಲ್ಲಿ ಸಂಗೀತ ಶಾಲೆಯನ್ನು ಪ್ರಾರಂಭಿಸಿದ ಶಿವಬಸವದೇವರು ಸಂಗೀತಕ್ಕೆ ಅಗತ್ಯವಿದ್ದ ಎಲ್ಲ ಸಲಕರಣೆಗಳನ್ನು ತಂದು ಚಿತ್ತರಗಿ ಗಂಗಾಧರ ಶಾಸ್ತ್ರಿಗಳ ನಾಟಕ ಕಂಪನಿಯವರಿಂದ ಸಹಾಯ ಸೌಲತ್ತು ಪಡೆದು ಮುನ್ನಡೆದ ಈ ಸಂಗೀತ ಶಾಲೆಯಲ್ಲಿ ಸುಮಾರು 7–8 ಸಾವಿರಕ್ಕೂ ಮೇಲ್ಪಟ್ಟು ಜನತೆ ಸಂಗೀತ ಕಲಿತು ಉನ್ನತ ಹುದ್ದೆಯಲ್ಲಿ ಸೇವಾ ಕಾರ್ಯ ಮುಂದುವರೆಸಿದ್ದಾರೆಂದು ಹೇಳಿದ ಕಾಶೀನಾಥ ಅವರು ಎ.ಎಸ್. ವಠಾರ ಸಂಸ್ಕೃತಿಕ ಕಲಾ ಸಂಘದ ವತಿಯಿಂದ ಇಂದು ಏರ್ಪಡಿಸಲಾದ ಗುರುಶಿಷ್ಯರ ಸ್ಮರಣೋತ್ಸವದ ಸಂಗೀತ ಕಾರ್ಯಕ್ರಮ ಇನ್ನೂ ಯಶಸ್ವಿಯಾಗಿ ಮುಂದುವರೆದು ಗವಾಯಿಗಳಾದ ವಿ.ಎ. ಸಾಲಿಮಠ ಅವರ ಶತಮಾನೋತ್ಸವ ಆಚರಣೆಯ ಕಾರ್ಯಕ್ರಮಕ್ಕೆ ಸಂಘ ಮುಂದಾಗಲೆಂದು ಆಶಿಸಿ ಗವಾಯಿ ಪಿ.ಎ. ಸಾಲಿಮಠ ಹಾಗೂ ಎ.ಎಸ್. ವಠಾರ ಅವರ ಗುರುಶಿಷ್ಯರ ಸಂಭಂದ ಕುರಿತು ಬಹು ಮಾರ್ಮಿಕವಾಗಿ ತಮ್ಮ ಭಾಷಣ ಉದ್ದಕ್ಕೂ ನೆನಪಿಸಿಕೊಂಡು ಭಾವುಕರಾದರು.

ಮುಖ್ಯ ಅತಿಥಿಗಳಾಗಿ ಆಗಮಿಸಿ ಹಿರಿಯ ಪತ್ರಕರ್ತರಾದ ಜಿ.ಟಿ. ಘೋರ್ಪಡೆ ಅವರು ಮಾತನಾಡಿ ಹಿರಿಯ ಗವಾಗಿಗಳಾದ ಪಿ.ಎ. ಸಾಲಿಮಠ ಹಾಗೂ ಎ.ಎಸ್. ವಠಾರ ಗುರುಗಳ ಆತ್ಮೀಯ ಸಂಭಂದ 1963 ನೇ ಸಾಲಿನಲ್ಲಿಯೇ ನನಗೆ ದೊರೆತಿತ್ತು ಆ ಸಾಲಿನಲ್ಲಿ ನಾನು 8 ನೇ ತರಗತಿಯಲ್ಲಿ ಓದುತ್ತಿದ್ದೆ ಸಂಗೀತವನ್ನು ಕಲಿಯಲು ಸಹ ನನಗೂ ಕೂಡಾ ಅಂದು ಅನುಕೂಲವಾಯಿತು ಇವರಿಬ್ಬರ ಸಂಗೀತ ಸೇವೆಯಲ್ಲಿ ಶಾಸ್ತ್ರೀಯ ಹಾಗೂ ವಿವಿಧ ನಮೂನೆಯ ಸಂಗೀತಗಳು ವಿದ್ಯಾರ್ಥಿಗಳಿಗೆ ಮನವರಿಕೆಯಾಗಲು ಅನುಕೂಲವಾಗಿತ್ತು ಅಂದು ಎಸ್.ಕೆ. ಹೈಸ್ಕೂಲ್‌ನಲ್ಲಿ ಶಿಕ್ಷಣ ನೀಡಿದ ಈ ಈರ್ವರು ಗವಾಯಿಗಳನ್ನು ಎಂದೂ ಮರೆಯುವಂತಿಲ್ಲವೆಂದು ಹೇಳಿದ ಘೋರ್ಪಡೆ ಅವರು ಸಂಗೀತವೆಂಬುದು ಸಾಮಾನ್ಯವಲ್ಲ ಸಂಗೀತವನ್ನು ಆಲಿಸಿ ಪಾಲಿಸಿದರೆ ದುಃಖ ದುಮ್ಮಾನಗಳು ದೂರವಾಗುತ್ತವೆ ಅಂದಿನ ಬಡತನದ ಪರಿಸ್ಥಿತಿಯಲ್ಲಿ ಕೇವಲ 50ರೂ ಮಾಶಾಸನದಂತೆ ತಮ್ಮ ಉಪಜೀವನವನ್ನು ಮಾಡಿಕೊಳ್ಳುತ್ತಾ ಸಾಗಿದ್ದ ಈ ಈರ್ವ ಗವಾಯಿಗಳ ಭಗ್ಗೆ ಎಷ್ಟು ಹೇಳಿದರೂ ಸಾಲದು ಈಗ ಅವರ ಮಕ್ಕಳು ಉನ್ನತ ಸ್ಥಾನಮಾನದಲ್ಲಿದ್ದು ಎಲ್ಲರಿಗೂ ಗೌರವದಿಂದ ಕಾಣುವಂತ ವ್ಯಕ್ತಿಗಳಾಗಿದ್ದಾರೆಂದರು.

ಶಿಕ್ಷಕರಾದ ರಮೇಶ ಯರಕ್ಯಾಳ ಅವರು ಪ್ರಾಸ್ತಾವಿಕ ಮಾತನಾಡಿ ಈ ಇಬ್ಬರು ಗವಾಯಿಗಳ ಸೇವಾ ಕಾರ್ಯ ಹಾಗೂ ಅವರ ಮನೆತನದ ಇತಿಹಾಸವನ್ನು ವಿವರಿಸಿದರು.

ಇದೇ ಸಮಯದಲ್ಲಿ ಶಿಕ್ಷಕಿ ವಿಶಾಲಾಕ್ಷಿ ಬಡಿಗೇರ ಹಾಗೂ ಕುಮಾರಿ ಶ್ರೇಯಾ ಪೂಜಾರಿ, ಚೈತ್ರಾ ಕುಬಸದ, ಅಶ್ವಿನಿ ಬಡಿಗೇರ, ಅನುಷಾ ಕೊಡಗಾನೂರ, ಅಕ್ಷತಾ ಬಿರಾದಾರ, ಅಶ್ವಿನಿ ವಂದಲಿ, ಕುಮಾರಿ ಯಾಳಗಿ, ಅಲ್ಲದೇ ಖ್ಯಾತ ಗವಾಯಿಗಳಾದ ರಾಜ್ಯಪ್ರಶಸ್ತಿ ಪುರಸ್ಕತರಾದ ಬಸವರಾಜ ಭಂಟನೂರ ಹಾಗೂ ತಬಲಾ ಸಾಥಿ ಯಮನೇಶ ಶಾಸ್ತ್ರಿ ಅವರು ಶಾಸ್ತ್ರೀಯ ಹಾಗೂ ಭಾವಗೀತೆಗಳನ್ನು ಹಾಡಿ ಜನರ ಮನಸ್ಸನ್ನು ತಣಿಸಿದರು.

ವೇದಿಕೆಯ ಮೇಲೆ ಗವಾಯಿಗಳಾದ ಮಲ್ಲಿಕಾರ್ಜುನ ಭಜಂತ್ರಿ ಅವರು ಅಧ್ಯಕ್ಷತೆ ವಹಿಸಿದ್ದರು. ಜಯಸಿಂಗ್ ಮೂಲಿಮನಿ, ವಾಸುದೇವ ಹೆಬಸೂರ, ಆಮಯ್ಯ ಹಿರೇಮಠ, ಪತ್ರಕರ್ತ ಬಸವರಾಜ ಕಟ್ಟಿಮನಿ, ಮಹಾಂತಯ್ಯ ಸಾಲಿಮಠ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.

ಕಾರ್ಯಕ್ರಮದ ಮೊದಲಿಗೆ ಗವಾಯಿ ಸಾಲಿಮಠ ಅವರ ಹಾಗೂ ವಠಾರ ಅವರ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಲಾಯಿತು. ಈ ಕಾರ್ಯಕ್ರಮದ ನೇತೃತ್ವವನ್ನು ಗವಾಯಿ ದೀಪಕಸಿಂಗ್ ಹಜೇರಿ, ಗೋವಿಂದಸಿಂಗ್ ಹಜೇರಿ ವಹಿಸಿದ್ದರು. ಈಶ್ವರ ಬಡಿಗೇರ, ಬಸಣ್ಣ ಗುರಿಕಾರ, ರಾಜು ಗುಬ್ಬೇವಾಡ, ಸುರೇಶ ಹೂಗಾರ, ಅಶೋಕ ರಾಜನಕೋಳೂರ, ಚಿಂತಾಮಣಿ ಸಾಲವಾಡಗಿ, ಗುಂಡಣ್ಣ ಹಂದಿಗನೂರ, ಮಲ್ಲಿಕಾರ್ಜುನ ನಾವಿ, ಆಮಯ್ಯ ಹಿರೇಮಠ ಮೊದಲಾದವರು ಉಪಸ್ಥಿತರಿದ್ದರು.

ಇದೇ ಸಮಯದಲ್ಲಿ ಅಧ್ಯಕ್ಷ, ಅತಿಥಿಗಳಿಗೆ ಹಾಗೂ ಖ್ಯಾತ ಸಂಗೀತ ಗವಾಯಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

# ಅಭಿನಂದನಾ ಸಮಾರಂಭ



**ಬೆಳಗಾವಿ ವಾರ್ತೆ ನವಲಗುಂದ:** ತಾಲ್ಲೂಕಿನಲ್ಲಿ ಕುಮಾರಗೊಪ್ಪ ಶಾಲೆ ಸೇರಿ ವಿವಿಧಡೆ ಸುದೀರ್ಘ ಸೇವೆ ಸಲ್ಲಿಸಿ ಮೌಲ್ಯಯುತ ಶಿಕ್ಷಣ ನೀಡುತ್ತಾ ಶಿಕ್ಷಣ ರಂಗದಲ್ಲಿ ಹಲವಾರು ಚೇತನಗಳಿಗೆ ಸ್ಫೂರ್ತಿಯಾಗಿ ಸೇವೆ ಸಲ್ಲಿಸಿ ನಿವೃತ್ತಿಯಾಗಿರುವ ಶಿಕ್ಷಕ ಶಿವಪ್ಪ ಅರೇರ ಅವರು ತಮ್ಮ ನಿವೃತ್ತಿ ಜೀವನವನ್ನು ಸಮಾಜಮುಖಿ ಚಿಂತನೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಬದುಕು ಸಾರ್ಥಕ ಪಡಿಸಿಕೊಳ್ಳಬೇಕು ಎಂದು ಅಜಾತ ನಾಗಲಿಂಗಸ್ವಾಮಿ ಮಠದ ವೀರೇಂದ್ರ ಸ್ವಾಮೀಜಿ ನುಡಿದರು.

ಅವರು ಸ್ಥಳೀಯ ಮೇಟಿ ಭವನದಲ್ಲಿ ತಾಲ್ಲೂಕಿನ ಕುಮಾರಗೊಪ್ಪ ಸರ್ಕಾರಿ ಶಾಲೆ ಶಿಕ್ಷಕ ಶಿವಪ್ಪ ಅರೇರ ಅವರ ಸೇವಾನಿವೃತ್ತಿ ಅಭಿನಂದನಾ ಸಮಾರಂಭದ ಸಾನಿಧ್ಯವಹಿಸಿ ಮಾತನಾಡಿದರು.

ಶಿಕ್ಷಕ ಶಿವಪ್ಪ ಅರೇರ ಸನ್ಮಾನ ಸ್ವೀಕರಿಸಿ ಮಾತನಾಡಿ ಮಕ್ಕಳೊಂದಿಗೆ ಕಳೆದ ದಿನಗಳು, ಅವರನ್ನು ಶೈಕ್ಷಣಿಕವಾಗಿ ಸಾಮಾಜಿಕವಾಗಿ ತಿದ್ದಿ ಬೆಳೆಸಿದ ಸಾರ್ಥಕ ಸೇವೆ ಸಲ್ಲಿಸಿದ ತೃಪ್ತಿ ನನಗಿದೆ ಎಂದು ತಮ್ಮ ಸೇವೆಯ ದಿನಗಳನ್ನು ಸ್ಮರಿಸಿಕೊಂಡರು. ಇದೆ ವೇಳೆ ದಂಪತಿಗಳನ್ನು ಸನ್ಮಾನಿಸಲಾಯಿತು.

ಹರೀಶ ಭೂಮ್ಮನಹಳ್ಳಿ, ಶಿವಾನಂದ ಕದಂ, ಜೀವನ ಪವಾರ, ಆರ್.ಬಿ.ಮುರನಾಳ ಮಂಜು ಜಾದವ, ಶಿವಾನಂದ ಬೆಂಚಿಕೇರಿ, ಮಹಾಂತೇಶ ಕುಲಕರ್ಣಿ, ಎಸ್ ಎಫ್ ನೀರಲಗಿ, ಪಿ ಕೆ ಹಿರೇಗೌಡ್ರ, ಹಾಗೂ ಪಡೆಸೂರ ಹಾಗೂ ಕುಮಾರಗೊಪ್ಪ ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷರು, ಪದಾಧಿಕಾರಿಗಳು ಇತರರು ಇದ್ದರು.

# ಭಾಗ್ಯಲಕ್ಷ್ಮೀ ಯೋಜನೆಯಡಿ ಪರಿಪಕ್ವ ಮೊತ್ತ ಜಮೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಭಾಗ್ಯಲಕ್ಷ್ಮೀ ಯೋಜನೆಯಡಿಯಲ್ಲಿ 18 ವರ್ಷ ಪೂರ್ಣಗೊಂಡ ಹೆಚ್ಚು ಮಕ್ಕಳಿಗೆ 2006–07ನೇ ಸಾಲಿನಲ್ಲಿ 32,352 ರೂ.ಗಳಂತೆ 6057 ಫಲಾನುಭವಿಗಳಿಗೆ ಹಾಗೂ 2007–08ನೇ ಸಾಲಿನಲ್ಲಿ 31,765 ರೂ.ಗಳಂತೆ 4835 ಫಲಾನುಭವಿಗಳು ಸೇರಿ ಒಟ್ಟು 10892 ಫಲಾನುಭವಿಗಳಿಗೆ ಎಲ್.ಐ.ಸಿ ಸಂಸ್ಥೆಯಿಂದ ನೇರವಾಗಿ ಡಿಬಿಟಿ ಮೂಲಕ ಫಲಾನುಭವಿಗಳ ಖಾತೆಗೆ ಜಮೆಯಾಗಿರುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ ತಿಳಿಸಿದ್ದಾರೆ.

2006–07 ಮತ್ತು 2007–08ನೇ ಸಾಲಿನಲ್ಲಿ ಜನಿಸಿದ ಹೆಣ್ಣು ಮಕ್ಕಳ ಯೋಜನೆಯಡಿ ನೋಂದಣಿಯಾಗಿ ಬಾಂಡ್ ಪಡೆದ ಫಲಾನುಭವಿಗಳಿಗೆ 18 ವರ್ಷ ಪೂರ್ಣಗೊಂಡಿದ್ದು, ಪರಿಪಕ್ವ ಮೊತ್ತ ಪಡೆಯಲು ಪ್ರಕ್ರಿಯೆ ಪ್ರಾರಂಭವಾಗಿರುತ್ತದೆ. ಈ ಯೋಜನೆಯಡಿ ಸೌಲಭ್ಯ ಪಡೆದ ಫಲಾನುಭವಿಗಳು ಭಾಗ್ಯಲಕ್ಷ್ಮೀ ಮೂಲ ಬಾಂಡ್, ಜನನ, ವ್ಯಾಸಂಗ ಪ್ರಮಾಣ ಪತ್ರ ಹಾಗೂ ಇತರೆ ದಾಖಲಾತಿಗಳನ್ನು ತೆಗೆದುಕೊಂಡು ಹತ್ತಿರದ ಅಂಗನವಾಡಿಗೆ ಅಥವಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಪ್ರಸ್ತಾವನೆ ಸಲ್ಲಿಸಬೇಕು. ಪ್ರತಿ ವರ್ಷ 18 ವರ್ಷ ತುಂಬಿದ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮೀ ಯೋಜನೆಯ ಪರಿಪಕ್ವ ಮೊತ್ತ ಒದಗಿಸಲಾಗುತ್ತಿದ್ದು, ಹೆಣ್ಣು ಮಕ್ಕಳಿಗೆ ಮುಂದಿನ ಹೆಚ್ಚಿನ ಶಿಕ್ಷಣಕ್ಕಾಗಿ ಆರ್ಥಿಕ ಸಹಾಯಧನ ಒದಗಿಸಿದಂತಾಗುತ್ತದೆ ಎಂದು ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001